ಲಿಖಿತ ಮೂಲಕ
ಉತ್ತರಿಸುವ ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೯೪

**ಪಟ್ಟಿ – ೦೭**

# ಕರ್ನಾಟಕ ವಿಧಾನ ಪರಿಷತ್ತು

**ನೂರ ನಲವತ್ತೆರಡನೆಯ ಅಧಿವೇಶನ**

**ಮಂಗಳವಾರ, ದಿನಾಂಕ : ೧೫ನೇ ಡಿಸೆಂಬರ್, ೨೦೨೦**

---

## ಸಮೂಹ – II

೧. ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು

೨. ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು

೩. ನಗರಾಭಿವೃದ್ಧಿ ಸಚಿವರು

೪. ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು

೫. ಗಣಿ ಮತ್ತು ಭೂವಿಜ್ಞಾನ ಸಚಿವರು

೬. ಸಹಕಾರ ಸಚಿವರು

---

## ಬೀದರ್ ಜಿಲ್ಲೆಯಲ್ಲಿ ನಡೆಯುತ್ತಿರುವ ಒಳಚರಂಡಿ ಬಗ್ಗೆ

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನ ಸಭೆಯಿಂದ ಚುನಾಯಿತರಾದವರು):–**

೬೪೭ (೭೭೩) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

ಜಿಲ್ಲೆಯಲ್ಲಿ ನಡೆದ ಹಾಗೂ ನಡೆಯುತ್ತಿರುವ ಒಳ ಚರಂಡಿಗಾಗಿ ಅಗೆಯಲಾದ ರಸ್ತೆಯನ್ನು ದುರಸ್ಥಿ ಮಾಡುವವರು ಯಾರು; ಈಗಾಗಲೇ ಎಷ್ಟು ಕಿ.ಮೀ. ಒಳಚರಂಡಿಯನ್ನು ನಿರ್ಮಿಸಲಾಗಿದೆಯೇ ?

## ಕಲ್ಯಾಣ ಕರ್ನಾಟಕ ವ್ಯಾಪ್ತಿಯಲ್ಲಿ ಬರುವ ಇಲಾಖೆಯಲ್ಲಿನ ಹುದ್ದೆಗಳ ಬಗ್ಗೆ

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನ ಸಭೆಯಿಂದ ಚುನಾಯಿತರಾದವರು):–**

೬೪೮ (೮೪೭) ಮಾನ್ಯ ಸಹಕಾರ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

ಕಲ್ಯಾಣ ಕರ್ನಾಟಕದ ವ್ಯಾಪ್ತಿಯಲ್ಲಿ ಬರುವ ಸಹಕಾರ ಇಲಾಖೆಗೆ ಮಂಜೂರಾಗಿದ್ದ ೪೩೪ ಹುದ್ದೆಗಳಲ್ಲಿ ೨೦೫ ಹುದ್ದೆಗಳು ಭರ್ತಿಯಾಗಿದ್ದು ಇನ್ನೂಳಿದ ೨೪೦ ಹುದ್ದೆಗಳು ಖಾಲಿಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಈ ಹುದ್ದೆಗಳನ್ನು ಭರ್ತಿ ಮಾಡಲಾಗುವುದು ಯಾವಾಗ ?

## ಸ್ಟೀಲ್ ಕಾರ್ಖಾನೆಗಳಿಗೆ ಸಹಾಯ ಧನ ನೀಡುವ ಬಗ್ಗೆ

**ಶ್ರೀ ಅಲ್ಲಂ ವೀರಭದ್ರಪ್ಪ (ವಿಧಾನ ಸಭೆಯಿಂದ ಚುನಾಯಿತರಾದವರು):–**

೬೪೯ (೭೮೦) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–



ಈಗಾಗಲೇ ಕೈಗಾರಿಕಾ ನೀತಿ ಘೋಷಣೆ ಹಂತದಲ್ಲಿದ್ದು ಕರ್ನಾಟಕದಲ್ಲಿರುವ ಸ್ಟೀಲ್ ಕಾರ್ಖಾನೆಗಳಿಗೆ ಆಂಧ್ರ ಪ್ರದೇಶದ ಮಾದರಿಯಲ್ಲಿ ಸಹಾಯ ಧನ (Subsidy) ನೀಡಲಾಗುತ್ತಿದೆಯೇ ?

## ಬೆಂಗಳೂರಿನಲ್ಲಿ ಮಳೆಯ ನೀರನ್ನು ಸಂಗ್ರಹಿಸುವ ಬಗ್ಗೆ

**ಶ್ರೀ ಅಲ್ಲಂ ವೀರಭದ್ರಪ್ಪ (ವಿಧಾನ ಸಭೆಯಿಂದ ಚುನಾಯಿತರಾದವರು):–**

೬೫೦ (೭೯೭) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಳೆಗಾಲದಲ್ಲಿ ಹೆಚ್ಚಿನ ಮಳೆ ನೀರನ್ನು ಸಂಗ್ರಹಿಸಲು ಏನಾದರೂ ಯೋಜನೆ ರೂಪಿಸಲಾಗಿದೆಯೇ ;

(ಆ) ಬೆಂಗಳೂರಿನಲ್ಲಿ ಎತ್ತರ ಮತ್ತು ತಗ್ಗು ಪ್ರದೇಶದಲ್ಲಾಗಲೀ ಸ್ಥಳ ಇಲ್ಲದಿದ್ದಲ್ಲಿ ತಗ್ಗು ಪ್ರದೇಶದಿಂದ ಎತ್ತರ ಪ್ರದೇಶಕ್ಕೆ ಏರಿಸುವ ಆಲೋಚನೆ ಮಾಡಲಾಗಿದೆಯೇ ?

## ಪಡಿತರ ವಿತರಣೆ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೬೫೧ (೭೫೬) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ಜಿಲ್ಲೆಯ ವ್ಯಾಪ್ತಿಯಲ್ಲಿ ಪಡಿತರ ಚೀಟಿ ಹೊಂದಿರುವ ಫಲಾನುಭವಿಗಳಿಗೆ ನ್ಯಾಯಬೆಲೆ ಅಂಗಡಿಗಳಲ್ಲಿ ಆಹಾರ ಧಾನ್ಯಗಳನ್ನು ವಿತರಿಸುವ ಸಮಯದಲ್ಲಿ ಫಲಾನುಭವಿಗಳ ಹೆಬ್ಬೆಟ್ಟಿನ ಗುರುತು ನೀಡುವಾಗ ಗ್ರಾಮೀಣ ಪ್ರದೇಶಗಳಲ್ಲಿ ಸರ್ವರ್

ಮಂದಗತಿಯಲ್ಲಿ ಕಾರ್ಯನಿರ್ವಹಿಸುತ್ತಿರುವುದರಿಂದ ಆಹಾರ ಧಾನ್ಯಗಳ ವಿತರಣೆಯಲ್ಲಿ ವಿಳಂಬವಾಗಿ ಫಲಾನುಭವಿಗಳಿಗೆ ತೊಂದರೆಯಾಗುತ್ತಿರುವುದರ ಜೊತೆಗೆ ಒಬ್ಬ ಫಲಾನುಭವಿಯಿಂದ ರೂ.೧೫/- ರೂಗಳನ್ನು ಸಂಗ್ರಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ; (ಸಂಪೂರ್ಣ ವಿವರ ನೀಡುವುದು)

(ಆ) ಇತ್ತೀಚಿನ ಸರ್ಕಾರದ ಆದೇಶದನ್ವಯ ಪಡಿತರ ಚೀಟಿ ಹೊಂದಿದ ಪ್ರತಿಯೊಬ್ಬ ಫಲಾನುಭವಿಗಳ ಇ.ಕೆ.ವೈ.ಸಿ ಫಾರಂನ್ನು ಭರ್ತಿ ಮಾಡಿ ನೀಡಬೇಕಾಗಿದ್ದು, ಹಲವಾರು ಫಲಾನುಭವಿಗಳಿಂದ ಈ ಫಾರಂನ್ನು ಭರ್ತಿ ಮಾಡಿ ನೀಡುವಲ್ಲಿ ವಿಳಂಬವಾಗುತ್ತಿರುವುದು ಹಾಗೂ ಆಹಾರ ಧಾನ್ಯಗಳ ವಿತರಣೆಯಲ್ಲಿ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ಸಂಪೂರ್ಣ ವಿವರ ನೀಡುವುದು)

(ಇ) ಪಡಿತರ ಚೀಟಿ ಹೊಂದಿರುವ ಫಲಾನುಭವಿಗಳು ಉದ್ಯೋಗ ಅರಸಿ ತಾತ್ಕಾಲಿಕವಾಗಿ ಬೇರೆ ಪ್ರದೇಶ/ನಗರಗಳಿಗೆ ಹೋಗಿರುವುದರಿಂದ ಇ.ಕೆ.ವೈಸಿ ಫಾರಂನ್ನು ಭರ್ತಿ ಮಾಡಿ ನೀಡುವಲ್ಲಿ ವಿಳಂಬವಾಗುತ್ತಿದ್ದು, ಅಂತಹ ಫಲಾನುಭವಿಗಳು ಅವರು ತಾತ್ಕಾಲಿಕವಾಗಿ ನೆಲಸಿರುವ ಗ್ರಾಮ/ಪಟ್ಟಣಗಳಲ್ಲಿ ಇ.ಕೆ.ವೈ.ಸಿ ಫಾರಂನ್ನು ಭರ್ತಿ ಮಾಡಿ ಆನ್‌ಲೈನ್ ಮುಖೇನ ಸಲ್ಲಿಸಲು ಅನುವು ಮಾಡಿಕೊಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ? (ಸಂಪೂರ್ಣ ವಿವರ ನೀಡುವುದು)



## ಅಡಿಗೆ ಅನಿಲ ಸಂಪರ್ಕ ನೀಡುವ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೬೫೨ (೭೫೫) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಂಡ್ಯ ಜಿಲ್ಲೆಯ ೦೭ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಅಡುಗೆ ಅನಿಲ ಸಂಪರ್ಕವನ್ನು ಪಡೆದಿರುವ ಫಲಾನುಭವಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಸದರಿ ಸಂಪರ್ಕವನ್ನು ಪಡೆಯಲು ಬಾಕಿ ಇರುವ ಫಲಾನುಭವಿಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು) ಸದರಿಯವರಿಗೆ ಯಾವ ಕಾಲಮಿತಿಯೊಳಗೆ ಸಂಪರ್ಕ ಕಲ್ಪಿಸಲಾಗುವುದು ;

(ಇ) ಅಡುಗೆ ಅನಿಲ ಸಂಪರ್ಕವನ್ನು ಪಡೆಯಲು ಸರ್ಕಾರ ನಿಗದಿಪಡಿಸಿರುವ ಮಾನದಂಡಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)

## ಹೊಸದಾಗಿ ಪಟ್ಟಣ ಪಂಚಾಯಿತಿಯಿಂದ ಪುರಸಭೆಯಾಗಿ ಮೇಲ್ದರ್ಜೆಗೇರಿಸಲಾದ ಪಟ್ಟಣಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೬೫೩ (೭೫೭) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಹೊಸದಾಗಿ ಪಟ್ಟಣ ಪಂಚಾಯಿತಿಯಿಂದ ಪುರಸಭೆಯಾಗಿ ಮೇಲ್ದರ್ಜೆಗೇರಿಸಲಾದ ಪಟ್ಟಣಗಳಾವುವು; ಈ ಪುರಸಭೆ ವ್ಯಾಪ್ತಿಗೆ ಸೇರ್ಪಡೆಗೊಂಡ ಎಲ್ಲಾ ಜನವಸತಿ

ಪ್ರದೇಶಗಳಿಗೆ ಒಳಚರಂಡಿ ಯೋಜನೆಗಳನ್ನು ಮಂಜೂರು ಮಾಡಲಾಗಿದೆಯೇ ; ಅವುಗಳ ಪ್ರಗತಿ ಏನು ; (ವಿವರ ನೀಡುವುದು)

(ಆ) ಪುರಸಭೆವಾರು ಭೌತಿಕ ಮತ್ತು ಆರ್ಥಿಕ ಪ್ರಗತಿಯ ಮಾಹಿತಿ ನೀಡುವುದು ;

(ಇ) ಮಂಡ್ಯ ಜಿಲ್ಲೆ ನಾಗಮಂಗಲ ಪುರಸಭೆ ವ್ಯಾಪ್ತಿಯಲ್ಲಿ ಒಳಚರಂಡಿ ಕಾಮಗಾರಿ ಮಂಜೂರು ಮಾಡಲಾಗಿದೆಯೇ; ಹಾಗಿದ್ದಲ್ಲಿ, ವಿವರ ನೀಡುವುದು ;

(ಈ) ಪುರಸಭೆ ವ್ಯಾಪ್ತಿಗೆ ಹೊಸದಾಗಿ ಒಳಪಟ್ಟ ಜನವಸತಿ ಪ್ರದೇಶಗಳಿಗೆ ಒಳಚರಂಡಿ ಕಲ್ಪಿಸಲು ಯೋಜನೆಯುನ್ನು ಸರ್ಕಾರ ರೂಪಿಸಲಾಗಿದೆಯೇ; ಹಾಗಿದ್ದಲ್ಲಿ, ಈ ಕಾರ್ಯ ಯೋಜನೆಯನ್ನು ಯಾವ ಕಾಲಮಿತಿಯೊಳಗೆ ಅನುಷ್ಠಾನಗೊಳಿಸಲಾಗುವುದು ? (ಯೋಜನೆಯ ಸಂಪೂರ್ಣ ವಿವರ ನೀಡುವುದು)

## ತೋಟಗಾರಿಕೆ ಇಲಾಖೆಯಲ್ಲಿರುವ ವಿವಿಧ ಯೋಜನೆಗಳ ಕುರಿತು

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೫೪ (೮೧೭) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತೋಟಗಾರಿಕೆ ಇಲಾಖೆಯಲ್ಲಿರುವ ವಿವಿಧ ಯೋಜನೆಗಳು ಯಾವುವು ; (ವಿವರ ನೀಡುವುದು)

(ಆ) ಕಳೆದ ಮೂರು ವರ್ಷಗಳಿಂದ ಇಲಾಖೆಯ ವಿವಿಧ ಯೋಜನೆ ಮತ್ತು ಲೆಕ್ಕಶೀರ್ಷಿಕೆಗಳ ಅಡಿಯಲ್ಲಿ ಮಂಜೂರು ಮಾಡಿರುವ ಮತ್ತು ಬಿಡುಗಡೆ ಮಾಡಿರುವ ಅನುದಾನ ಎಷ್ಟು; ಈ ಪೈಕಿ ಖರ್ಚಾದ ಮತ್ತು ಉಳಿದ ಹಣ ಎಷ್ಟು ; (ವರ್ಷವಾರು, ಯೋಜನೆವಾರು, ಲೆಕ್ಕಶೀರ್ಷಿಕೆವಾರು, ಮಂಡ್ಯ ಜಿಲ್ಲೆಯ ತಾಲ್ಲೂಕುವಾರು ಅನುದಾನದ ವಿವರ ನೀಡುವುದು)



(ಇ) ಮಂಡ್ಯ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಿಂದ ಇಲಾಖೆಯ ವಿವಿಧ ಯೋಜನೆಗಳ ಅಡಿಯಲ್ಲಿ ಪ್ರಯೋಜನ ಪಡೆದ ಫಲಾನುಭವಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು, ಫಲಾನುಭವಿಗಳವಾರು, ವರ್ಷವಾರು ಪೂರ್ಣ ವಿವರ ನೀಡುವುದು)

(ಈ) ಜಿಲ್ಲೆಯಲ್ಲಿ ಸರ್ಕಾರದ ವಿವಿಧ ಯೋಜನೆಗಳಿಗೆ ಪ್ರಸಕ್ತ ಸಾಲಿನಲ್ಲಿ ಹೆಚ್ಚುವರಿಯಾಗಿ ಅನುದಾನವನ್ನು ಮಂಜೂರು ಮಾಡಿ ಬಿಡುಗಡೆ ಮಾಡಲಾಗಿದೆಯೇ ; (ವಿವರ ನೀಡುವುದು)

(ಉ) ಸರ್ಕಾರವು ಪ್ರಸಕ್ತ ಸಾಲಿನಲ್ಲಿ ಈಗಿರುವ ಯೋಜನೆಗಳ ಜೊತೆಯಲ್ಲಿ ರೈತರಿಗೆ ಅನುಕೂಲವಾಗುವ ಯಾವುದಾದರೂ ಹೊಸ ಯೋಜನೆಗಳನ್ನು ಜಾರಿಗೆ ತರಲಿದೆಯೇ ? (ವಿವರ ನೀಡುವುದು)

## ಭೂಮಿ ಕಳೆದುಕೊಂಡ ರೈತರಿಗೆ ನೇರವಾಗಿ ಪರಿಹಾರ ನೀಡುವ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೬೫೫ (೮೫೬) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಾಣಿಜ್ಯ ಮತ್ತು ಕೈಗಾರಿಕಾ ಇಲಾಖಾ ವ್ಯಾಪ್ತಿಯಲ್ಲಿ ಬರುವ ಪ್ರಾಧಿಕಾರ/ಮಂಡಳಿ/ನಿಗಮಗಳು ಸಾರ್ವಜನಿಕ ಉದ್ದೇಶಕ್ಕೆ ರೈತರ ಜಮೀನನ್ನು ಭೂಸ್ವಾಧೀನ ಪಡಿಸಿಕೊಂಡಾಗ ಇದರ ಹಣವು ನೇರವಾಗಿ ರೈತರಿಗೆ ತಲುಪದೇ ಮಧ್ಯವರ್ತಿಗಳಿಗೆ ತಲುಪುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಇತ್ತೀಚಿನ ದಿನಪತ್ರಿಕೆಯ ಮುಖಪುಟದಲ್ಲಿ ಪ್ರಕಟಿಸಿರುವಂತೆ ಭೂಮಿ ಕಳೆದುಕೊಂಡ ರೈತರಿಗೆ ಪರಿಹಾರ ಸರಿಯಾಗಿ ಸಿಕ್ಕಿಲ್ಲವೆಂಬ ಅಂಶವು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಈ ಸಂಬಂಧ ಸರ್ಕಾರವು ಸಂಬಂಧಪಟ್ಟ ರೈತರಿಗೆ ನೇರವಾಗಿ ಪರಿಹಾರ ದೊರಕುವಂತಾಗಲು ಯಾವ ಕ್ರಮಗಳನ್ನು ಕೈಗೊಂಡಿದೆ ; (ವಿವರವಾದ ಮಾಹಿತಿ ನೀಡುವುದು)

(ಈ) ವಾಣಿಜ್ಯ ಮತ್ತು ಕೈಗಾರಿಕಾ ಇಲಾಖಾ ವ್ಯಾಪ್ತಿಯಲ್ಲಿ ಬರುವ ಯಾವ ಯಾವ ಪ್ರಾಧಿಕಾರ/ಮಂಡಳಿ/ನಿಗಮಗಳು ಯಾವ ಯಾವ ಅಧಿನಿಯಮದನ್ವಯ ಯಾವ ಕಲಂನಡಿ ರೈತರ ಜಮೀನನ್ನು ಭೂ ಸ್ವಾಧೀನಪಡಿಸಿಕೊಳ್ಳಲು ಅಧಿಕಾರ ಹೊಂದಿವೆ ; (ವಿವರವಾದ ಮಾಹಿತಿ ನೀಡುವುದು)

(ಉ) ಭೂ ಸ್ವಾಧೀನಗೊಂಡ ಭೂಮಿಯನ್ನು ಡಿ ನೋಟಿಫೈ ಮಾಡಲು ಹಾಲಿ ಇರುವ ಮಾರ್ಗಸೂಚಿಗಳೇನು; ಯಾವ ಜಮೀನುಗಳನ್ನು ಡಿ ನೋಟಿಫೈ ಮಾಡಬಹುದಾಗಿದೆ ? (ವಿವರವಾದ ಮಾಹಿತಿ ನೀಡುವುದು)

## ಸಾರ್ವಜನಿಕ ಉದ್ದಿಮೆಗಳ CSR ಅನುದಾನದ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೬೫೬ (೮೫೭) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಸಾರ್ವಜನಿಕ ಉದ್ದಿಮೆಗಳೆಷ್ಟು; ಅವುಗಳನ್ನು ನಿಯಂತ್ರಿಸುವ ಆಡಳಿತ ಇಲಾಖೆಗಳಾವುವು ; (ವಿವರವಾಗಿ ಆಡಳಿತ ಇಲಾಖೆವಾರು ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿ ಕಳೆದ ೩ ವರ್ಷಗಳಲ್ಲಿ ಸಾರ್ವಜನಿಕ ಉದ್ದಿಮೆಗಳು Corporate Social Responsibility ಅಡಿ ಎಷ್ಟು ಹಣವನ್ನು ಕ್ರೋಢೀಕರಿಸಿವೆ ; (ವರ್ಷವಾರು, ಉದ್ದಿಮೆವಾರು ಮಾಹಿತಿ ನೀಡುವುದು)



(ಇ) ಈ ಅನುದಾನದಲ್ಲಿ ಸದರಿ ಉದ್ದಿಮೆಗಳು ಕಳೆದ ೩ ವರ್ಷಗಳಿಂದ ಯಾವ ಯಾವ ಕಾಮಗಾರಿಗಳಿಗೆ ಎಷ್ಟು ಹಣವನ್ನು ಯಾವ ಏಜೆನ್ಸಿ ಮೂಲಕ ಬಿಡುಗಡೆ ಮಾಡಿವೆ;(ವರ್ಷವಾರು, ಉದ್ದಿಮೆವಾರು, ಏಜೆನ್ಸಿವಾರು ಕಾಮಗಾರಿ ವಿವರಗಳೊಂದಿಗೆ ವಿವರವಾದ ಮಾಹಿತಿ ನೀಡುವುದು)

(ಈ) ಈ ಅನುದಾನವನ್ನು ಯಾವ ಕಾಮಗಾರಿಗಳಿಗೆ ವಿನಿಯೋಗಿಸಬಹುದಾಗಿದೆ; ಇದರ ಸಂಬಂಧ ಸರ್ಕಾರ ಹೊರಡಿಸಿರುವ ಮಾರ್ಗ ಸೂಚಿಗಳೇನು ?

## ನಗರೋತ್ಥಾನಕ್ಕೆ ಮಂಜೂರಾದ ಅನುದಾನ ಬಗ್ಗೆ

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :–**

೬೫೭ (೮೩೦) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಿಂದ ಚಿಕ್ಕಮಗಳೂರು ತಾಲ್ಲೂಕಿನ ನಗರೋತ್ಥಾನದಡಿಯಲ್ಲಿ ಎಸ್‌ಸಿ/ಎಸ್‌ಟಿ ಗೆ ಮಂಜೂರಾದ ಅನುದಾನವೆಷ್ಟು ಹಾಗೂ ಕೈಗೊಂಡ ಕಾಮಗಾರಿಗಳು ಯಾವುವು ; (ವಿವರ ನೀಡುವುದು)

(ಆ) ಕಾಮಗಾರಿ ಸಂಬಂಧ ಟೆಂಡರ್ ಪ್ರಕ್ರಿಯೆ ಆಗಿದೆಯೇ; ಹಾಗಿದಲ್ಲಿ, ಟೆಂಡರ್‌ನಲ್ಲಿ ಭಾಗವಹಿಸಿದವರ ಹಾಗೂ ಅವಾರ್ಡ್ ಪಡೆದವರ ಪೂರ್ಣ ಮಾಹಿತಿ ನೀಡವುದು ;

(ಇ) ಯಾವ ಕಾಲಮಿತಿಯೊಳಗೆ ಕಾಮಗಾರಿ ಪೂರ್ಣಗೊಳಿಸಲಾಗುವುದು ? (ವಿವರ ನೀಡುವುದು)

## ಕಳಪೆ ಕಾಮಗಾರಿಗಳ ಕುರಿತು

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :–**

೬೫೮ (೮೨೯) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೋವಿಡ್ ಕಾರಣದಿಂದ ಲಾಕ್‌ಡೌನ್ ಹೇರಲ್ಪಟ್ಟ ಸಂದರ್ಭದಲ್ಲಿ ರಾಜ್ಯದ ವಿವಿಧ ನಗರಗಳ ರಸ್ತೆ ಕಾಮಗಾರಿಗಳು ನೆನಗುದಿಗೆ ಬಿದ್ದಿದ್ದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಅಪೂರ್ಣಗೊಂಡ ಕಾಮಗಾರಿಗಳ ಸಂಪೂರ್ಣ ಮಾಹಿತಿ ನೀಡುವುದು ;

(ಆ) ರಾಜ್ಯದ ಮುಖ್ಯ ನಗರಗಳಲ್ಲಿ ಕೋವಿಡ್ ಸಂದರ್ಭದಲ್ಲಿ ತಡೆಹಿಡಿಯಲಾಗಿದ್ದ ಕಾಮಗಾರಿಗಳಿಂದ ರಾಜ್ಯದ ಬೊಕ್ಕಸಕ್ಕೆ ಉಳಿತಾಯವಾಗಿದೆಯೇ ; (ವಿವರದೊಂದಿಗೆ ಮಾಹಿತಿ ನೀಡುವುದು)

(ಇ) ಕೆಲವು ರಸ್ತೆ ಮತ್ತು ಮೂಲಸೌಕರ್ಯ ಕಾಮಗಾರಿಯ ಗುತ್ತಿಗೆದಾರರು ನಗರಾಭಿವೃದ್ಧಿಯ ವಿವಿಧ ಯೋಜನೆಗಳಲ್ಲಿ ಕಳಪೆ ಗುಣಮಟ್ಟದ ಕಾಮಗಾರಿ ನಿರ್ವಹಿಸಿ ಬಿಲ್ ಪಾವತಿ ಮಾಡಿಸಿಕೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಆ ಗುತ್ತಿಗೆದಾರರ ವಿರುದ್ಧ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ? (ವಿವರ ನೀಡುವುದು)

## ತೋಟಗಾರಿಕೆ ಇಲಾಖೆಯ ಸಿಬ್ಬಂದಿಗಳ ಮುಂಬಡ್ತಿ ನೀಡುವ ಬಗ್ಗೆ

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :–**

೬೫೯ (೮೩೧) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–



(ಅ) ದಿನಾಂಕ:೦೩-೦೯-೨೦೨೦ರಂದು ನಡೆದ ಇಲಾಖೆಯ ಮುಂಬಡ್ತಿ ಸಭೆಯಲ್ಲಿ ೫೪ ಅಧಿಕಾರಿಗಳಿಗೆ ಶಿಫಾರಸ್ಸು ಮಾಡಿ ಅದರಲ್ಲಿ ೨೨ ಅಧಿಕಾರಿಗಳಿಗೆ ಮಾತ್ರ ಮುಂಬಡ್ತಿ ನೀಡಲಾಗಿದ್ದು, ಉಳಿದ ಅಧಿಕಾರಿಗಳ ಮುಂಬಡ್ತಿ ನೀಡದಿರಲು ಕಾರಣವೇನು ; (ವಿವರ ನೀಡುವುದು)

(ಆ) ಪ್ರಸ್ತುತ ಇಲಾಖೆಯಲ್ಲಿ ಖಾಲಿ ಉಳಿದಿರುವ ಸಹಾಯಕ ತೋಟಗಾರಿಕೆ ನಿರ್ದೇಶಕರ ಹುದ್ದೆಗಳ ಸಂಖ್ಯೆ ಎಷ್ಟು; ಇದರಲ್ಲಿ ನೇರ ನೇಮಕಾತಿ ಮತ್ತು ಮುಂಬಡ್ತಿ ನೀಡಲು ನಿಗದಿಪಡಿಸಿದ ಹುದ್ದೆಗಳ ವಿವರ ನೀಡುವುದು ;

(ಇ) ತೋಟಗಾರಿಕೆ ಸಹಾಯಕರ ಹುದ್ದೆಗಳನ್ನು ರೈತ ಸಂಪರ್ಕ ಕೇಂದ್ರಗಳ ಅಡಿಯಲ್ಲಿ ನಿಯೋಜಿಸದೇ ತಾಲ್ಲೂಕು ಕಛೇರಿ ಅಧೀನದಲ್ಲಿ ನಿಯೋಜಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇದರಿಂದ ರೈತ ಸಂಪರ್ಕ ಕೇಂದ್ರದಲ್ಲಿರುವ ಸಹಾಯಕ ತೋಟಗಾರಿಕೆ ಅಧಿಕಾರಿಗಳಿಗೆ ಹೋಬಳಿ ವ್ಯಾಪ್ತಿಯಲ್ಲಿ ಕರ್ತವ್ಯನಿರ್ವಹಿಸಲು ಕಷ್ಟಸಾಧ್ಯವಾಗಿರುವುದು ಸರ್ಕಾರದ ಗಮನದಲ್ಲಿದಿಯೇ ;

(ಈ) ಎಸ್.ಎಸ್.ಎಲ್.ಸಿ/ಪಿ.ಯು.ಸಿ ಮತ್ತು ೧೦ ತಿಂಗಳ ತೋಟಗಾರಿಕೆ ಡಿಪ್ಲೋಮೊ/ತರಬೇತಿ ಪಡೆದ ನೇಮಕಗೊಂಡಿರುವ ತೋಟಗಾರಿಕೆ ಸಹಾಯಕರಿಗೆ ನೇರವಾಗಿ ಸಹಾಯಕರು ತೋಟಗಾರಿಕೆ ಅಧಿಕಾರಿ (ಬಿ–ವೃಂದ) ಹುದ್ದೆಗೆ ಮುಂಬಡ್ತಿ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಯಾವ ಆಧಾರದ ಮೇಲೆ ತಾಂತ್ರಿಕ ಹುದ್ದೆಗೆ ಬಡ್ತಿ ನೀಡಲಾಗುತ್ತಿದೆ;ಇದರಿಂದ ತೋಟಗಾರಿಕೆ ವಿಶ್ವವಿದ್ಯಾಲಯದಲ್ಲಿರುವ ಬಿ.ಎಸ್.ಸಿ/ಎಂ.ಎಸ್.ಸಿ ಪಡೆದ ವಿದ್ಯಾರ್ಥಿಗಳಿಗೆ ಅನ್ಯಾಯವಾಗುವುದಿಲ್ಲವೇ ?

## ಹುದ್ದೆಗಳಿಗೆ ನೇಮಕ ಮಾಡುವ ಬಗ್ಗೆ

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :–**

೬೬೦ (೮೨೭) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಹಕಾರ ಇಲಾಖೆಯಲ್ಲಿ ವಿವಿಧ ವೃಂದಗಳ ಮಂಜೂರಾಗಿರುವ, ಭರ್ತಿಯಾಗಿರುವ ಹಾಗೂ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ರಾಜ್ಯದಲ್ಲಿ ಸಹಕಾರ ಅಭಿವೃದ್ದಿ ಅಧಿಕಾರಿಗೆ, ಸಹಕಾರ ಸಂಘಗಳ ಸಹಾಯಕ ನಿಬಂಧಕರ ಹುದ್ದೆಯ ಪ್ರಭಾರವನ್ನು ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಆದೇಶದ ಪ್ರತಿಯೊಂದಿಗೆ ವಿವರ ನೀಡುವುದು ;

(ಇ) ಈ ರೀತಿಯಾಗಿ ಅವರಿಗೆ ಹೆಚ್ಚುವರಿ ಪ್ರಭಾರ ನೀಡಲು ಹಾಗೂ ಹುದ್ದೆಯ ಅಧಿಕಾರ ಚಲಾಯಿಸಲು ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ–೧೯೫೯ರಲ್ಲಿ ಅವಕಾಶ ಕಲ್ಪಿಸಲಾಗಿದೆಯೇ; ಹಾಗಾದಲ್ಲಿ, ಯಾವ ಕ್ರಮವನ್ನು ಸರ್ಕಾರದಿಂದ ತೆಗೆದುಕೊಳ್ಳಲಾಗುವುದು ;

(ಈ) ಸಹಕಾರ ಸಂಘಗಳ ಸಹಾಯಕ ನಿಬಂಧಕರ ಹುದ್ದೆಯ ಹೆಚ್ಚಿನ ಪ್ರಭಾರ ನಿರ್ವಹಿಸುತ್ತಿರುವ ಎಷ್ಟು ಸಹಕಾರ ಅಭಿವೃದ್ಧಿ ಅಧಿಕಾರಿಗಳ ವಿರುದ್ದ ಸರ್ಕಾರಕ್ಕೆ ದೂರುಗಳು ಸ್ವೀಕೃತವಾಗಿದೆ ; ಹಾಗೂ ಅವರುಗಳ ಮೇಲೆ ಯಾವ ಕ್ರಮ ತೆಗೆದುಕೊಳ್ಳಲಾಗಿದೆ ? (ವಿವರ ಒದಗಿಸುವುದು)



## M-Sand ತಯಾರಿಸಲು ಪರವಾನಗಿ ನೀಡಿರುವ ಬಗ್ಗೆ

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :–**

೬೬೧ (೮೨೮) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಿಕ್ಕಮಗಳೂರು ತಾಲ್ಲೂಕಿನಲ್ಲಿ M-Sand ತಯಾರಿಸಲು ಕೋರಿ ಬಂದಿರುವ ಅರ್ಜಿಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ಚಿಕ್ಕಮಗಳೂರು ತಾಲ್ಲೂಕಿನ ಯಾವ ಯಾವ ಭಾಗಗಳಲ್ಲಿ ಇಲಾಖೆಯಿಂದ M-Sand ತಯಾರಿಸಲು ಅನುಮತಿ ನೀಡಲಾಗಿದೆ ; ಈ ಸಂಬಂಧ ಅನುಮೋದನೆ ಪಡೆಯಲು ಇಲಾಖೆಯಿಂದ ವಿಧಿಸಿರುವ ಷರತ್ತುಗಳೇನು ; (ವಿವರ ನೀಡುವುದು)

(ಇ) ಅರ್ಜಿ ಸಲ್ಲಿಸಿದ ಎಷ್ಟು ದಿನಗಳೊಳಗೆ ಅರ್ಜಿಗಳ ವಿಲೇವಾರಿ ಮಾಡಿ ಆದೇಶ ನೀಡಲಾಗಿದೆ ; (ಪರವಾನಗಿ ನೀಡಿರುವ ಎಲ್ಲಾ ಸಂಸ್ಥೆಗಳವಾರು ದಾಖಲೆ/ಆದೇಶ ಪ್ರತಿಯೊಂದಿಗೆ ಪೂರ್ಣ ವಿವರ ನೀಡುವುದು)

(ಈ) ಪರವಾನಗಿ ನೀಡಿರುವ ಸಂಸ್ಥೆಗಳವಾರು ಇಲಾಖೆಯ ಪರಿಶೀಲನಾ ವರದಿ/ಎನ್‌ಓಸಿ ಹಾಗೂ ಒಡಂಬಡಿಕೆ ಪತ್ರದ ಪ್ರತಿಗಳನ್ನು ನೀಡುವುದು ?

## "ಉಜ್ವಲ" ಇಂಧನ ಯೋಜನೆ ಬಗ್ಗೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೬೨ (೭೯೬) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ "ಉಜ್ವಲ" ಇಂಧನ ಯೋಜನೆಯಡಿ ಬಿ.ಪಿ.ಎಲ್ ಕುಟುಂಬಗಳಿಗೆ ಅಡುಗೆ ಅನಿಲ ವಿತರಿಸಲಾಗಿದೆಯೇ ; ಇದಕ್ಕಾಗಿ ಸ್ವೀಕರಿಸಿದ ಅರ್ಜಿಗಳು ಎಷ್ಟು; ಎಷ್ಟು ಜನರಿಗೆ ಅಡುಗೆ ಅನಿಲ ವಿತರಿಸಲಾಗಿದೆ ; ಇನ್ನು ಎಷ್ಟು ಜನರಿಗೆ ವಿತರಿಸಬೇಕಾಗಿದೆ ; (ಕಳೆದ ೨ ವರ್ಷಗಳ ಮಾಹಿತಿ ನೀಡುವುದು)

(ಆ) "ಉಜ್ವಲ" ಇಂಧನ ಯೋಜನೆಯ ಫಲಾನುಭವಿಗಳನ್ನು ಆಯ್ಕೆ ಮಾಡಲು ಅನುಸರಿಸುವ ಕ್ರಮವೇನು; ಇದಕ್ಕಿರುವ ಮಾನದಂಡಗಳೇನು ?

## ತೋಟಗಾರಿಕಾ ಅಭಿವೃದ್ಧಿ ಯೋಜನೆಗಳ ಬಗ್ಗೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೬೩ (೭೯೫) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಎರಡು ವರ್ಷಗಳಲ್ಲಿ ತೋಟಗಾರಿಕೆ ಇಲಾಖೆಯಿಂದ ತೋಟಗಾರಿಕೆ ಅಭಿವೃದ್ಧಿಗಾಗಿ ಯಾವ ಯಾವ ಯೋಜನೆಗಳನ್ನು ಹಮ್ಮಿಕೊಳ್ಳಲಾಗಿದೆ ; ಹಾಗೂ ಇದಕ್ಕಾಗಿ ಎಷ್ಟು ಅನುದಾವನ್ನು ನಿಗಧಿಪಡಿಸಲಾಗಿದೆ ; ಎಷ್ಟು ಹಣ ಖರ್ಚು ಮಾಡಲಾಗಿದೆ ;

(ಆ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಯಾವ ಯಾವ ಯೋಜನೆಗಳನ್ನು ಜಾರಿಗೆ ತರಲಾಗಿದೆ ; ಇದಕ್ಕಾಗಿ ಖರ್ಚು ಮಾಡಲಾದ ಹಣ ಎಷ್ಟು ; ಇದರಿಂದ ಪ್ರಯೋಜನ ಪಡೆದ ರೈತರ ಸಂಖ್ಯೆ ಎಷ್ಟು ? (ತಾಲ್ಲೂಕುವಾರು ಮಾಹಿತಿ ನೀಡುವುದು)



## ಅಕ್ರಮ ಮೊಬೈಲ್ ಟವರ್ ಅಳವಡಿಕೆ ಬಗ್ಗೆ

**ಶ್ರೀ ಕೆ. ಗೋವಿಂದ ರಾಜ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೬೪ (೮೦೧) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಅಳವಡಿಸಲಾಗಿರುವ ಮೊಬೈಲ್ ಟವರ್‌ಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು, ಸಂಸ್ಥೆಯ ವಿವರ ಒದಗಿಸುವುದು)

(ಆ) ರಾಜ್ಯದಲ್ಲಿ ಮೊಬೈಲ್ ಟವರ್ ಅಳವಡಿಕೆಗೆ ಅನುಸರಿಸಲಾಗುತ್ತಿರುವ ಮಾನದಂಡ ಏನು ; (ಮಾರ್ಗಸೂಚಿಗಳ ಪ್ರತಿ ಒದಗಿಸುವುದು)

(ಇ) ಅನುಮತಿ ರಹಿತ ಅನಧಿಕೃತ ಮೊಬೈಲ್ ಟವರ್‌ಗಳ ಅಳವಡಿಕೆಯಿಂದ ರಾಜ್ಯದ ಬೊಕ್ಕಸಕ್ಕೆ ಆಗುತ್ತಿರುವ ಆರ್ಥಿಕ ಹಾನಿ ಅಸಮರ್ಪಕ ಅಳವಡಿಕೆಯಿಂದ ಉಂಟಾಗಬಹುದಾದ ಜೀವಹಾನಿ ಕುರಿತು ಸರ್ಕಾರ ಗಂಭೀರವಾಗಿ ಆಲೋಚಿಸಿದೆಯೇ ; (ಪ್ರತ್ಯೇಕ ವಿವರ ಒದಗಿಸುವುದು)

(ಈ) ಅನಧಿಕೃತ ಮೊಬೈಲ್ ಟವರ್ ಅಳವಡಿಕೆ ನಿಯಂತ್ರಿಸುವ ನಿಟ್ಟಿನಲ್ಲಿ ಹಾಗೂ ನಾಗರೀಕರ ಸುರಕ್ಷತೆ ಕುರಿತಾಗಿ ಸರ್ಕಾರ ಗಂಭೀರವಾಗಿ ಆಲೋಚಿಸಿದೆಯೇ ; ಹಾಗಿದ್ದಲ್ಲಿ, ಈ ನಿಟ್ಟಿನಲ್ಲಿ ಕೈಗೊಂಡ ಕ್ರಮಗಳೇನು ? (ಕುರಿತು ಮಾಹಿತಿ ಒದಗಿಸುವುದು)

## ಕೋಲಾರ ನಗರಸಭೆ ವ್ಯಾಪ್ತಿಯ ರಸ್ತೆಗಳ ಗಡಿಯನ್ನು ಗುರುತಿಸುವ ಕುರಿತು

**ಶ್ರೀ ಕೆ. ಗೋವಿಂದ ರಾಜ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೬೫ (೭೭೧) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೋಲಾರ ನಗರಸಭೆಯ ವ್ಯಾಪ್ತಿಯ ರಸ್ತೆಗಳ ಗಡಿಯನ್ನು ಗುರುತಿಸಲಾಗಿದೆಯೇ ;

(ಆ) ಈ ರಸ್ತೆಗಳ ಗಡಿಯನ್ನು ಗುರುತಿಸುವಾಗ ಸರ್ಕಾರ ಅನುಸರಿಸಿರುವ ಮಾನದಂಡಗಳೇನು; ಈ ರಸ್ತೆಗಳ ಗಡಿಯನ್ನು ಯಾವ ವೈಜ್ಞಾನಿಕ ಆಧಾರದ ಮೇಲೆ ಗುರುತಿಸಲಾಗಿದೆ ;

(ಇ) ಈ ರಸ್ತೆಗಳ ಗಡಿಯನ್ನು ಜನಪ್ರತಿನಿಧಿಗಳ ಗಮನಕ್ಕೆ ತರಲಾಗಿದೆಯೇ ;

(ಈ) ಹಾಗಿಲ್ಲದಿದ್ದಲ್ಲಿ, ಜನಪ್ರತಿನಿಧಿಗಳ ಹಾಗೂ ಜನಸಾಮಾನ್ಯರ ಗಮನಕ್ಕೆ ತರದಿರಲು ಕಾರಣಗಳೇನು ?

## ತೋಟಗಾರಿಕೆ ಇಲಾಖೆಗೆ ಬಿಡುಗಡೆಯಾಗಿರುವ ಅನುದಾನದ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೬೬೬ (೮೦೨) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ತೋಟಗಾರಿಕೆ ಇಲಾಖೆಯಲ್ಲಿ ವಿವಿಧ ಲೆಕ್ಕ ಶೀರ್ಷಿಗಳಡಿಯಲ್ಲಿ ಕೇಂದ್ರ ವಲಯ, ರಾಜ್ಯ ವಲಯ ಹಾಗೂ ಇತರೆ ವಲಯಗಳಡಿ ಹಲವು ಯೋಜನೆಗಳಿಗೆ ಕಳೆದ ಮೂರು ವರ್ಷಗಳಲ್ಲಿ ಮಂಜೂರಾದ ಅನುದಾನವೆಷ್ಟು; ಮಂಜೂರಾದ ಅನುದಾನದ ವಿವರವನ್ನು ಆರ್ಥಿಕ ಹಾಗೂ ಭೌತಿಕ ಪ್ರಗತಿ ಫಲಾನುಭವಿಗಳ ವಿವರಗಳೊಂದಿಗೆ ಯೋಜನೆವಾರು ಸಂಪೂರ್ಣ ವಿವರ ನೀಡುವುದು ;

(ಆ) ಹಾಸನ ಜಿಲ್ಲೆಯ ತೋಟಗಾರಿಕಾ ಇಲಾಖಾ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿಧ ತೋಟಗಾರಿಕಾ ಕ್ಷೇತ್ರಗಳು/ ನರ್ಸರಿಗಳು ಯಾವುವು; ಸದರಿ ಕ್ಷೇತ್ರಗಳ/ನರ್ಸರಿ ಅಭಿವೃದ್ಧಿ, ನಿರ್ವಹಣೆ ಹಾಗೂ ವಿವಿಧ ಕಾರ್ಯ ಚಟುವಟಿಕೆಗಳಿಗಾಗಿ ಕಳೆದ ೩ ವರ್ಷಗಳಲ್ಲಿ ವಿವಿಧ ಲೆಕ್ಕಶೀರ್ಷಿಕೆಗಳಡಿಯಲ್ಲಿ ಬಿಡುಗಡೆಗೊಂಡ ಅನುದಾನವೆಷ್ಟು ; (ಕ್ಷೇತ್ರವಾರು, ವಾರ್ಷಿಕವಾರು, ಲೆಕ್ಕ ಶೀರ್ಷಿಕೆವಾರು ಸಂಪೂರ್ಣ ವಿವರ ನೀಡುವುದು)



(ಇ) ಸದರಿ ತೋಟಗಾರಿಕಾ ಕ್ಷೇತ್ರಗಳಿಗೆ ಕಳೆದ ೩ ವರ್ಷಗಳಲ್ಲಿ ಬಿಡುಗಡೆಗೊಂಡ ಅನುದಾನದಿಂದ ಕೈಗೊಂಡ ಕಾರ್ಯಕ್ರಮಗಳಾವುವು ; ಸದರಿ ಕಾರ್ಯಕ್ರಮಗಳನ್ನು ಯಾವ ಏಜೆನ್ಸಿಯ ಮುಖಾಂತರ ಕೈಗೊಳ್ಳಲಾಗಿದೆ ? (ವಿವರ ನೀಡುವುದು)

## ಪಡಿತರ ವಿತರಣೆ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೬೬೭ (೮೦೩) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಲಾಕ್‌ಡೌನ್ ಸಮಯದಲ್ಲಿ ಬಡವರಿಗೆ ಸರ್ಕಾರದ ವತಿಯಿಂದ ಒದಗಿಸಲಾದ ಪಡಿತರವು ಸೂಕ್ತ ಫಲಾನುಭವಿಗಳಿಗೆ ಸೂಕ್ತ ಸಮಯಕ್ಕೆ ಸಿಗದೆ ದಲ್ಲಾಳಿಗಳ ಪಾಲಾಗಿ ಬಡವರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಸರ್ಕಾರ ಪಡಿತರ ವ್ಯವಸ್ಥೆಯ ಪಾರದರ್ಶಕತೆ ಕಾಪಾಡಲು ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಇ) ಅತ್ಯಂತ ಕಡು ಬಡವರಿಗೆ ಅಂತ್ಯೋದಯ ಯೋಜನೆಯಡಿ ನೀಡುವ ಪಡಿತರವು ಅವರಿಗೆ ಸಾಲದೆ ಅವರ ದೈನಂದಿನ

ಜೀವನ ನಿರ್ವಹಣೆಗೆ ಕಷ್ಟಸಾಧ್ಯವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಸದರಿಯವರಿಗೆ ಹೆಚ್ಚಿನ ಸೌಲಭ್ಯ ನೀಡಲು ಸರ್ಕಾರ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಈ) ಪಡಿತರ ವ್ಯವಸ್ಥೆಯಲ್ಲಿ ಅಂತ್ಯೋದಯ, ಬಿಪಿಎಲ್, ಎಪಿಎಲ್, ಪಡಿತರ ಚೀಟಿಯನ್ನು ಸಾರ್ವಜನಿಕರ ಆರ್ಥಿಕ ಪರಿಸ್ಥಿತಿ ಆಧರಿಸಿ ನೀಡಿರುವಂತೆ ರಾಜ್ಯದಲ್ಲಿರುವ ವಿಶೇಷ ಚೇತನರಿಗೆ, ವಿಧವೆಯರಿಗೆ ಹಾಗೂ ಇತರರಿಗೆ ವಿಶೇಷ ಪಡಿತರ ಚೀಟಿ ವಿತರಿಸಿ ಸೌಲಭ್ಯ ನೀಡುವ ಯೋಜನೆಯ ಕುರಿತು ಸರ್ಕಾರದ ನಿಲುವೇನು ? (ವಿವರ ನೀಡುವುದು)

## ಹೊರಗುತ್ತಿಗೆ ನೌಕರರನ್ನು ಸೇವೆಯಿಂದ ಕೈಬಿಟ್ಟಿರುವ ಕುರಿತು

**ಶ್ರೀ ಕೆ. ಹರೀಶ್ ಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೬೮ (೮೨೬) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೇಂದ್ರ ಸರ್ಕಾರದ ಸೂಚನೆ ಮೇರೆಗೆ ಕರ್ನಾಟಕ ಸರ್ಕಾರವು ಎ.ಪಿ.ಎಂ.ಸಿ. ಕಾಯ್ದೆ ತಿದ್ದುಪಡಿ ತಂದಿದ್ದು, ಹಲವು ವರ್ಷಗಳಿಂದ ಹೊರಗುತ್ತಿಗೆ ಆಧಾರದ ಮೇಲೆ ಕನಿಷ್ಠ ವೇತನದಡಿ ದುಡಿಯುತ್ತಿರುವ ನೌಕರರನ್ನು ಸೇವೆಯಿಂದ ಕೈಬಿಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಕನಿಷ್ಠ ವೇತನದಡಿಯಲ್ಲಿ ದುಡಿಯುತ್ತಿರುವ ನೌಕರರನ್ನು ಏಕಾಏಕಿ ಕೆಲಸದಿಂದ ತೆಗೆದಿರುವುದರಿಂದ ಇವರನ್ನೇ ನಂಬಿರುವ ಕುಟುಂಬದವರು ಬೀದಿ ಪಾಲಾಗುತ್ತಿರುವುದರಿಂದ, ಸದರಿ ಕಾರ್ಯನಿರ್ವಹಿಸುತ್ತಿರುವ ಹೊರಗುತ್ತಿಗೆ ನೌಕರರನ್ನು ಮುಂದುವರೆಸುವ ಕುರಿತು ಸರ್ಕಾರದ ನಿಲುವೇನು ?



## ಒಳಚರಂಡಿ ಪೈಪ್ ಲೈನ್‌ಗಳನ್ನು ಸ್ವಚ್ಛಗೊಳಿಸುವ ವಾಹನಗಳ ಬಗ್ಗೆ

**ಶ್ರೀ ಬಿ.ಕೆ. ಹರಿಪ್ರಸಾದ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೬೯ (೭೫೦) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಒಳಚರಂಡಿ ಪೈಪ್‌ಲೈನ್‌ಗಳನ್ನು ಸ್ವಚ್ಛಗೊಳಿಸಲು ಇರುವ ವಾಹನಗಳ ಸಂಖ್ಯೆ ಎಷ್ಟು ;

(ಆ) ಈ ವಾಹನಗಳ ಸೇವೆಯನ್ನು ಉಚಿತವಾಗಿ ನೀಡಲಾಗುತ್ತಿದೆಯೇ ಅಥವಾ ಇದರ ಸೇವೆಯುನ್ನು ಪಡೆಯುಲು ಶುಲ್ಕ ವಿಧಿಸಲಾಗುತ್ತಿದೆಯೇ ?

## ನಂದಿನಿ ಬೂತ್‌ಗಳ ಬಗ್ಗೆ

**ಶ್ರೀ ಬಿ.ಕೆ. ಹರಿಪ್ರಸಾದ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೭೦ (೭೫೧) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನಂದಿನಿ ಬೂತ್ ಪ್ರಾಂಚೈಸಿಗಳನ್ನು ಮಂಜೂರು ಮಾಡಲು ಇರುವ ಮಾನದಂಡಗಳೇನು ;

(ಆ) ನಂದಿನ ಬೂತ್‌ಗಳಲ್ಲಿ ಟೀ ಮತ್ತು ಕಾಫಿಯನ್ನು ಮಾರಾಟ ಮಾಡಲು ಅವಕಾಶವಿದೆಯೇ ;

(ಇ) ನಂದಿನಿ ಬೂತ್‌ಗಳನ್ನು ಹಂಚಿಕೆ ಮಾಡಿಕೊಂಡು ಉಪ ಗುತ್ತಿಗೆ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಅಂತವರ ವಿರುದ್ಧ ಕೈಗೊಂಡ ಕ್ರಮಗಳೇನು ?

## ನ್ಯಾಯಬೆಲೆ ಅಂಗಡಿಗಳ ಬಗ್ಗೆ

**ಶ್ರೀ ಬಿ.ಕೆ. ಹರಿಪ್ರಸಾದ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೭೧ (೭೫೨) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಒಟ್ಟು ನ್ಯಾಯಬೆಲೆ ಅಂಗಡಿಗಳ ಸಂಖ್ಯೆ ಎಷ್ಟು; ನ್ಯಾಯಬೆಲೆ ಅಂಗಡಿಗಳ ಪರವಾನಿಗೆಯನ್ನು ಹೊಂದಲು ಇರಬೇಕಾದ ಅರ್ಹತೆಗಳೇನು ;

(ಆ) ಒಂದು ನ್ಯಾಯಬೆಲೆ ಅಂಗಡಿಗೆ ಎಷ್ಟು ಕುಟುಂಬಗಳಿಗೆ ಪಡಿತರ ನೀಡಲು ಅನುಮತಿ ನೀಡಲಾಗುವುದು ;

(ಇ) ಸರ್ಕಾರ ಹಂಚಿಕೆ ಮಾಡಿದ ಪಡಿತರವು ವಿತರಣೆಯಾಗದಿದ್ದಲ್ಲಿ ಅದನ್ನು ಸರ್ಕಾರ ವಾಪಸ್ಸು ಪಡೆದುಕೊಳ್ಳುವುದೇ ಅಥವಾ ಮುಂದಿನ ತಿಂಗಳಿಗೆ ಹೊಸದಾಗಿ ಪಡಿತರ ಹಂಚಿಕೆ ಮಾಡುವಾಗ ಉಳಿಕೆಯನ್ನೂ ಸಹ ಲೆಕ್ಕ ಹಾಕುವುದೇ ?

## ತೂಕ ಮತ್ತು ಅಳತೆ ಇಲಾಖೆಯಲ್ಲಿ ನಡೆಯುತ್ತಿರುವ ಅಕ್ರಮಗಳ ಬಗ್ಗೆ

**ಶ್ರೀ ಬಿ.ಕೆ. ಹರಿಪ್ರಸಾದ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೭೨ (೭೫೩) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತೂಕ ಮತ್ತು ಅಳತೆಯಲ್ಲಿ ಮೋಸ ಮಾಡುತ್ತಿರುವ ಪೆಟ್ರೋಲ್ ಪಂಪ್‌ಗಳ ಮೇಲೆ ಇಲಾಖೆಯ ಯಾವ ಮಟ್ಟದ ಅಧಿಕಾರಿಗಳು ದಾಳಿ ಮಾಡಬಹುದು ;



(ಆ) ಕಳೆದ ಮೂರು ವರ್ಷಗಳಲ್ಲಿ ಎಷ್ಟು; ಪೆಟ್ರೋಲ್ ಪಂಪ್‌ಗಳ ಮೇಲೆ ದಾಳಿ ನಡೆಸಲಾಗಿದೆ ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಇ) ಮೋಸ ಮಾಡುತ್ತಿರುವ ಪೆಟ್ರೋಲ್ ಪಂಪ್‌ಗಳ ಮಾಲೀಕರ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಬೆಂಗಳೂರು ನಗರದಲ್ಲಿ ಕಾರ್ಯನಿರ್ವಹಿಸುತ್ತಿರುವ ಉದ್ದಿಮೆಗಳ ಬಗ್ಗೆ

**ಶ್ರೀ ಬಿ.ಕೆ. ಹರಿಪ್ರಸಾದ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೭೩ (೭೫೪) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರದಲ್ಲಿ ಕಾರ್ಯನಿರ್ವಹಿಸುತ್ತಿರುವ ಉದ್ದಿಮೆಗಳ ಸಂಖ್ಯೆ ಎಷ್ಟು ;

(ಆ) ನಗರದಲ್ಲಿ ಹೊಸ ಉದ್ದಿಮೆಗಳನ್ನು ಸ್ಥಾಪಿಸುವ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯ ಆಸ್ತಿಗಳ ಕುರಿತು

**ಶ್ರೀ ಕಾಂತರಾಜ್ (ಬಿಎಂಎಲ್)(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೭೪ (೮೫೨) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯನ್ನು ಯಾವಾಗ, ಎಲ್ಲಿ ಪ್ರಾರಂಭಿಸಲಾಯಿತು ; ಇದರ ಇತಿಹಾಸ ಹಾಗೂ ಧ್ಯೇಯೋದ್ದೇಶಗಳೇನು ; (ವಿವರವಾದ ಮಾಹಿತಿ ನೀಡುವುದು)

(ಆ) ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯ ಆಸ್ತಿಗಳು ಯಾವುವು ; ಅವುಗಳು ಎಲ್ಲಿವೆ ; ಅವುಗಳ ಇಂದಿನ ಮೌಲ್ಯವೇನು ; ಇದರ ಮೇಲೆ ಸರ್ಕಾರದ ಹೊಣೆಗಾರಿಕೆ ಎಷ್ಟಿದೆ ; (ವಿವರವಾದ ಮಾಹಿತಿ ನೀಡುವುದು)

(ಇ) ಕಳೆದ ೩ ವರ್ಷಗಳಲ್ಲಿ ಸದರಿ ಮಂಡಳಿಗೆ ಕೇಂದ್ರ ಸರ್ಕಾರ ಹಾಗೂ ರಾಜ್ಯ ಸರ್ಕಾರದಿಂದ ಯಾವ ಯಾವ ಯೋಜನೆಗಳಡಿ ಎಷ್ಟು ಹಣ ಬಿಡುಗಡೆಯಾಗಿದೆ ; ಇದರಲ್ಲಿ ಸಹಾಯಧನವೆಷ್ಟು ; (ವಿವರವಾದ ಮಾಹಿತಿ ನೀಡುವುದು)

(ಈ) ಈ ಮಂಡಳಿಯ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಅನುಮೋದನೆಗೊಂಡ ಹುದ್ದೆಗಳ ಸಂಖ್ಯೆ ಎಷ್ಟು ; ಇದರಲ್ಲಿ ಭರ್ತಿ ಆಗಿರುವ ಹುದ್ದೆಗಳು ಎಷ್ಟು ; ಖಾಲಿ ಇರುವ ಹುದ್ದೆಗಳು ಎಷ್ಟು ? (ವಿವರವಾಗಿ ಹುದ್ದೆಯ ಪದನಾಮ, ವೇತನ ಶ್ರೇಣಿ, ವಿದ್ಯಾರ್ಹತೆ, ಆಯ್ಕೆ ಮಾದರಿ, ಹುದ್ದೆವಾರು ವಿವರವಾದ ಸಂಪೂರ್ಣ ಮಾಹಿತಿ ನೀಡುವುದು)

## ಗುಬ್ಬಿ ಪಟ್ಟಣದ ಮಾರನಕಟ್ಟೆಯ ಜಾಗದ ಬಗ್ಗೆ

**ಶ್ರೀ ಕಾಂತರಾಜ್ (ಬಿಎಂಎಲ್)(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೭೫ (೮೫೩) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತುಮಕೂರು ಜಿಲ್ಲೆ ಗುಬ್ಬಿ ಪಟ್ಟಣ ಪಂಚಾಯ್ತಿ ಎಷ್ಟು ಜನಸಂಖ್ಯೆಯನ್ನು ಹೊಂದಿದೆ; ವಾರ್ಡುಗಳ ಸಂಖ್ಯೆ ಎಷ್ಟು; ಪಟ್ಟಣ ಪಂಚಾಯ್ತಿಯ ಸರಹದ್ದು ಎಲ್ಲಿಯವರೆಗೆ ಇದೆ ; (ವಿವರವಾದ ಮಾಹಿತಿ ನೀಡುವುದು)



(ಆ) ಗುಬ್ಬಿ ಪಟ್ಟಣ ಪಂಚಾಯ್ತಿ ವ್ಯಾಪ್ತಿಯಲ್ಲಿ ಮಾರನಕಟ್ಟೆ ಕೆರೆ ಇದೆಯೇ; ಹಾಗಿದ್ದಲ್ಲಿ, ಇದರ ವಿಸ್ತೀರ್ಣವೆಷ್ಟು ; ಇದಕ್ಕೆ ಮಾಲೀಕರು ಯಾರು ; (ವಿವರವಾದ ಮಾಹಿತಿ ನೀಡುವುದು)

(ಇ) ಸದರಿ ಮಾರನಕಟ್ಟೆ ಕೆರೆ ಜಾಗವನ್ನು ಸರ್ಕಾರವು ಯಾವ ಯಾವ ಸಂಸ್ಥೆಗಳಿಗೆ ಗುತ್ತಿಗೆ/ಕ್ರಯಕ್ಕೆ ನೀಡಿರುತ್ತದೆ ; (ವಿವರವಾಗಿ ಸಂಸ್ಥೆಯ ಹೆಸರು, ಗುತ್ತಿಗೆ/ಕ್ರಯ ನೀಡಿದ ವರ್ಷ ಹಾಗೂ ವಿಸ್ತೀರ್ಣದೊಂದಿಗೆ ಸರ್ಕಾರಿ ಆದೇಶ ಪ್ರತಿಗಳೊಂದಿಗೆ ವಿವರವಾದ ಮಾಹಿತಿ ನೀಡುವುದು)

(ಈ) ಇದರಲ್ಲಿ ಖಾಲಿ ಉಳಿದಿರುವ ಜಾಗ ಎಷ್ಟು ; ಇದನ್ನು ಸರ್ಕಾರ ಯಾವ ಉದ್ದೇಶಕ್ಕೆ ಬಳಸಲು ಉದ್ದೇಶಿಸಿದೆ ?

## ಅಪೆಕ್ಸ್ ಬ್ಯಾಂಕ್ ಆಸ್ತಿಗಳ ಬಗ್ಗೆ

**ಶ್ರೀ ಕಾಂತರಾಜ್ (ಬಿಎಂಎಲ್)(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೭೬ (೮೫೪) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅಪೆಕ್ಸ್ ಬ್ಯಾಂಕ್‌ನ್ನು ಯಾವಾಗ ಎಲ್ಲಿ ಪ್ರಾರಂಭಿಸಲಾಯಿತು; ಇದರ ಇತಿಹಾಸ ಹಾಗೂ ಧ್ಯೇಯೋದ್ಧೇಶಗಳೇನು ; (ವಿವರವಾದ ಮಾಹಿತಿ ನೀಡುವುದು)

(ಆ) ಈ ಬ್ಯಾಂಕಿನ ಪ್ರಾರಂಭದಿಂದ ಇಲ್ಲಿಯವರೆಗೂ ಇದರ ಸಿ.ಎಂ.ಡಿ ಗಳು ಯಾರು ಯಾರು; ಯಾವ ಅವಧಿಯಲ್ಲಿ ಬ್ಯಾಂಕ್ ಲಾಭದಲ್ಲಿತ್ತು ಮತ್ತು ಯಾವ ಅವಧಿಯಲ್ಲಿ ಬ್ಯಾಂಕ್ ನಷ್ಟದಲ್ಲಿತ್ತು; ನಷ್ಟದಲ್ಲಿರಲು ಕಾರಣಗಳೇನು ; (ವರ್ಷವಾರು ವಿವರವಾದ ಮಾಹಿತಿ ನೀಡುವುದು)

(ಇ) ಅಪೆಕ್ಸ್ ಬ್ಯಾಂಕ್‌ನ ಆಸ್ತಿಗಳು ಯಾವುವು; ಅವುಗಳು ಎಲ್ಲಿವೆ; ಅವುಗಳ ಇಂದಿನ ಮೌಲ್ಯವೇನು; ಇದರ ಮೇಲೆ ಸರ್ಕಾರದ ಹೊಣೆಗಾರಿಕೆ ಎಷ್ಟಿದೆ ; (ವಿವರವಾದ ಮಾಹಿತಿ ನೀಡುವುದು)

(ಈ) ಸದರಿ ಬ್ಯಾಂಕ್‌ಗೆ ಕೇಂದ್ರ ಸರ್ಕಾರ ಹಾಗೂ ರಾಜ್ಯ ಸರ್ಕಾರದಿಂದ ಕಳೆದ ೨ ವರ್ಷಗಳಲ್ಲಿ ಯಾವ ಯಾವ ಯೋಜನೆಗಳಡಿ ಎಷ್ಟು ಹಣ ಬಿಡುಗಡೆಯಾಗಿದೆ; ಇದರಲ್ಲಿ ಸಹಾಯಧನವೆಷ್ಟು ; (ವಿವರವಾದ ಮಾಹಿತಿ ನೀಡುವುದು)

(ಉ) ಈ ಬ್ಯಾಂಕು ತುಮಕೂರು ಜಿಲ್ಲೆಯ ತುರುವೇಕೆರೆ ತಾಲ್ಲೂಕಿನ ರೈತರಿಗೆ ಎಷ್ಟು ಸಾಲವನ್ನು ನೀಡಿದೆ ? (ವಿವರವಾದ ಮಾಹಿತಿ ಕೊಡುವುದು)

## ಜಿಲ್ಲಾ ಖನಿಜ ನಿಧಿ ಅನುದಾನದ ಬಗ್ಗೆ

**ಶ್ರೀ ಕಾಂತರಾಜ್ (ಬಿಎಂಎಲ್)(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೭೭ (೮೫೫) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಜಿಲ್ಲಾ ಖನಿಜ ಪ್ರತಿಷ್ಠಾನ ಟ್ರಸ್ಟ್ (DMFT) ಗಳು ಅಸ್ತಿತ್ವದಲ್ಲಿವೆಯೇ; ಹಾಗಿದ್ದಲ್ಲಿ, ಅವು ಯಾವುವು; ಇವುಗಳ ಸ್ಥಾಪನೆಯ ಉದ್ದೇಶಗಳೇನು ; (ವಿವರವಾದ ಮಾಹಿತಿ ನೀಡುವುದು)

(ಆ) ಸದರಿ ಟ್ರಸ್ಟ್‌ಗಳ ಅಡಿ ಹಾಲಿ ಲಭ್ಯವಿರುವ ಅನುದಾನವೆಷ್ಟು; ಸದರಿ ಅನುದಾನವನ್ನು ಯಾವ ಮೂಲದಿಂದ ಶೇಖರಿಸಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಈ ಅನುದಾನವನ್ನು ಯಾವ ಯಾವ ಕಾರ್ಯಗಳಿಗೆ ವಿನಿಯೋಗಿಸಲಾಗುವುದು ; ಇದರ ಸಂಬಂಧ ಹಾಲಿ ಇರುವ ಮಾರ್ಗ ಸೂಚಿಗಳೇನು ; ಇಲ್ಲಿಯವರೆಗೆ ಖರ್ಚಾಗದೇ



ಉಳಿದಿರುವ ಅನುದಾನವೆಷ್ಟು ; (ವಿವರವಾಗಿ ಜಿಲ್ಲಾವಾರು ಸಂಸ್ಥೆಗಳ ಮಾಹಿತಿ ನೀಡುವುದು)

(ಈ) ತುಮಕೂರು, ಚಿತ್ರದುರ್ಗ ಮತ್ತು ದಾವಣಗೆರೆ ಜಿಲ್ಲೆಗಳಲ್ಲಿ ಕಳೆದ ೩ ವರ್ಷಗಳಿಂದ ಈ ಅನುದಾನದಡಿ ಯಾವ ಯಾವ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಉ) ಈ ಅನುದಾನವನ್ನು ಹಂಚಿಕೆ ಮಾಡುವ ಸಮಯದಲ್ಲಿ ಸರ್ಕಾರವು ಮಾನ್ಯ ವಿಧಾನ ಸಭಾ ಸದಸ್ಯರಿಗೆ ಮಾತ್ರ ಮನ್ನಣೆ ನೀಡಿ ಮಾನ್ಯ ವಿಧಾನ ಪರಿಷತ್ ಸದಸ್ಯರುಗಳಿಗೆ ಅನುದಾನವನ್ನು ಹಂಚಿಕೆ ಮಾಡಿಲ್ಲದಿರುವುದು ಸರಿಯೇ;

(ಊ) ಈ ತಾರತಮ್ಯವನ್ನು ಸರ್ಕಾರ ಯಾವ ಕಾಲಮಿತಿಯೊಳಗೆ ಸರಿಪಡಿಸಲಿದೆ ?

## ರಾಜ್ಯದಲ್ಲಿ ಘನತ್ಯಾಜ್ಯ ನಿರ್ವಹಣೆ ಕುರಿತು

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೭೮ (೭೬೦) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಇತ್ತೀಚೆಗೆ ಬೆಂಗಳೂರು ಸೇರಿದಂತೆ ಘನತ್ಯಾಜ್ಯ ನಿರ್ವಹಣೆಯು ಅತ್ಯಂತ ದೊಡ್ಡ ಸಮಸ್ಯೆಯಾಗಿದ್ದು, ಇದರ ಪರಿಣಾಮಕಾರಿಯಾದ ನಿರ್ವಹಣೆಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ರಾಜ್ಯದ ಎಷ್ಟು ಜಿಲ್ಲೆಗಳಲ್ಲಿ ಘನತ್ಯಾಜ್ಯ ಸಂಸ್ಕರಣಾ ಘಟಕಗಳನ್ನು ಸ್ಥಾಪಿಸಲಾಗಿದೆ; ಹಾಗೂ ಇದಕ್ಕೆ ತಗಲುವ ವೆಚ್ಚದ ವಿವರ ನೀಡುವುದು ;

(ಇ) ಈ ಘನತ್ಯಾಜ್ಯ ಸಂಸ್ಕರಣೆಗಳಿಲ್ಲದೇ ಇದರಿಂದ ವಿದ್ಯುತ್ ಉತ್ಪಾದನೆಗೂ ಅವಕಾಶವಿದೆ ಎಂದು ವರದಿಯಾಗಿದ್ದು, ಇದರ ಬಗ್ಗೆ ಸರ್ಕಾರದ ನಿಲುವೇನು ;

(ಈ) ಸರ್ಕಾರದ ಅನೇಕ ಪ್ರತಿನಿಧಿಗಳು ಘನತ್ಯಾಜ್ಯ ನಿರ್ವಹಣೆಗೆ ಸಂಬಂಧಿಸಿದಂತೆ ವಿವಿಧ ರಾಜ್ಯ ಹಾಗೂ ದೇಶಗಳಿಗೆ ಭೇಟಿ ನೀಡಿ ಘನತ್ಯಾಜ್ಯದ ಬಗ್ಗೆ ಹೊಸ ತರಬೇತಿ ಹಾಗೂ ತಾಂತ್ರಿಕತೆ ತಂದಿದ್ದರೂ ಅದನ್ನು ಅನುಷ್ಠಾನಕ್ಕೆ ತರುವಲ್ಲಿ ಸರ್ಕಾರ ಹಿಂದೇಟು ಹಾಕುತ್ತಿರುವುದಕ್ಕೆ ಕಾರಣವೇನು ?

## ರಾಜ್ಯದಲ್ಲಿರುವ ಸಹಕಾರಿ ಸಂಘಗಳ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೭೯ (೭೬೧) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸಹಕಾರಿ ಸಂಘದ ಕಾಯಿದೆಯಡಿಯಲ್ಲಿ ನೋಂದಾಯಿಸಲ್ಪಟ್ಟ ಸಹಕಾರಿ ಸಂಘಗಳ ವರ್ಗವಾರು, ಜಿಲ್ಲಾವಾರು ಮಾಹಿತಿ ನೀಡುವುದು ;

(ಆ) ಸದರಿ ನೋಂದಾಯಿತ ಸಹಕಾರಿ ಸಂಘಗಳಲ್ಲಿ ಬ್ಯಾಂಕಿಂಗ್ ಮತ್ತು ನಾನ್–ಬ್ಯಾಂಕಿಂಗ್ ಸಹಕಾರಿ ಸಂಘಗಳ ಸಂಖ್ಯೆ ಎಷ್ಟು ;

(ಇ) ಸದರಿ ಸಹಕಾರಿ ಸಂಘಗಳಲ್ಲಿ ಎಷ್ಟು ಸಂಘಗಳು ಲಾಭದಾಯಕವಾಗಿ ನಡೆಯುತ್ತಿವೆ; ಹಾಗೂ ಎಷ್ಟು ಸಂಘಗಳು ನಷ್ಟ ಅನುಭವಿಸುತ್ತಿವೆ; ನಷ್ಟ ಅನುಭವಿಸಲು ಕಾರಣಗಳೇನು ;

(ಈ) ನಷ್ಟದಲ್ಲಿ ನಡೆಯುತ್ತಿರುವ ಸಹಕಾರಿ ಸಂಘಗಳನ್ನು ಪುನಃಶ್ಚೇತನಗೊಳಿಸಲು ಸರ್ಕಾರವು ಕೈಗೊಂಡ ಕ್ರಮವೇನು ;



(ಉ) ಒಟ್ಟು ನೋಂದಾಯಿತವಾದ ಸಹಕಾರಿ ಸಂಘಗಳಲ್ಲಿ, ಸಂಘಗಳ ಸಂಖ್ಯೆ ಎಷ್ಟು ; ಎಷ್ಟು Liquidation ಮಾಡಲಾಗಿದೆ ?

## ರಾಜ್ಯದಲ್ಲಿ ಪಡಿತರ ಚೀಟಿ ಹಾಗೂ ಪಡಿತರ ವಿತರಣೆ ಕುರಿತು

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೮೦ (೭೬೨) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಪಡಿತರ ವಿತರಣಾ ವ್ಯವಸ್ಥೆಯನ್ನು ಸದೃಢ ಹಾಗೂ ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ರಾಜ್ಯದಲ್ಲಿ ಒಟ್ಟು ಪಡಿತರ ಕಾರ್ಡುದಾರರಲ್ಲಿ ಬಿಪಿಎಲ್ ಕಾರ್ಡು ಹೊಂದಿದವರ ಸಂಖ್ಯೆ ಹಾಗೂ ಎಪಿಎಲ್ ಕಾರ್ಡು ಹೊಂದಿದವರ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಬಿಪಿಎಲ್ ಕಾರ್ಡುದಾರರಿಗೆ ನೀಡುವ ಪಡಿತರದ ವಿವರ ನೀಡುವುದು ;

(ಈ) ಹಲವು ಜಿಲ್ಲೆಗಳಲ್ಲಿ ಅಪಾರ ಪ್ರಮಾಣದ ಪಡಿತರವು ವಿತರಣೆಯಾಗದೇ ಉಳಿಯುತ್ತಿದ್ದು, ಅದನ್ನು ಸರ್ಕಾರ ಯಾವ ರೀತಿ ಉಪಯೋಗ ಮಾಡುತ್ತಿದೆ ;

(ಉ) ಪ್ರಸಕ್ತ ಸಾಲಿನಲ್ಲಿ ಎಷ್ಟು ನಕಲಿ ಪಡಿತರ ಚೀಟಿಗಳನ್ನು ಗುರುತಿಸಲಾಗಿದೆ ;

(ಊ) ಕೇಂದ್ರ ಸರ್ಕಾರದ ಒಂದು ರಾಷ್ಟ್ರ ಒಂದು ಪಡಿತರ ಯೋಜನೆಯನ್ನು ಘೋಷಿಸಿದ್ದು, ಇದರ ಅನುಷ್ಠಾನಕ್ಕೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ರಾಜ್ಯದಲ್ಲಿ ಹೊಸ ಕೈಗಾರಿಕಾ ನೀತಿ ಜಾರಿಗೆ ತಂದಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೮೧ (೭೬೩) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಹೊಸ ಕೈಗಾರಿಕಾ ನೀತಿಯನ್ನು ತಂದಿದ್ದು, ಇದರ ಪರಿಣಾಮಕಾರಿ ಅನುಷ್ಠಾನಕ್ಕಾಗಿ ಸರ್ಕಾರ ಯಾವ ಮಾನದಂಡಗಳನ್ನು ಹಮ್ಮಿಕೊಳ್ಳಲಾಗಿದೆ ;

(ಆ) ಕೋವಿಡ್–೧೯ರ ಪರಿಣಾಮವಾಗಿ ಸರ್ಕಾರ ಲಾಕ್‌ಡೌನ್ ವಿಧಿಸಿದ್ದರಿಂದ ಹಲವಾರು ಉದ್ಯಮಗಳು ನಷ್ಟ ಅನುಭವಿಸಿದ್ದು, ಅವುಗಳು ಪುನರಾರಂಭಗೊಳ್ಳುವುದೇ ಕಷ್ಟವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಇಂತಹ ರೋಗಪೀಡಿತ ಉದ್ಯಮಗಳಿಂದ ಇದಕ್ಕೆ ಸಂಬಂಧಿಸಿದ ಇತರ ಉದ್ದಿಮೆಗಳು ಸ್ಥಗಿತಗೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಇಂತಹ ರೋಗಪೀಡಿತ ಉದ್ದಿಮೆಗಳಿಂದ (Sick Industries) ಉದ್ಯಮ ಹಾಗೂ ಉದ್ಯೋಗೀಕರಣದ ಮೇಲೆ ದುಷ್ಪರಿಣಾಮ ಉಂಟಾಗುತ್ತಿರುವುದನ್ನು ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಹೊಸ ಕೈಗಾರಿಕಾ ನೀತಿಯನ್ನು ಜಾರಿಗೊಳಿಸುವ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೮೨ (೭೬೪) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–



(ಅ) ರಾಜ್ಯದಲ್ಲಿ ಹೊಸ ಕೈಗಾರಿಕಾ ನೀತಿಯನ್ನು ಜಾರಿಗೆ ತಂದಿದ್ದು, ಇದರ ಅನುಷ್ಠಾನಕ್ಕಾಗಿ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ (KIADB) ವತಿಯಿಂದ ಯಾವ ಯಾವ ಜಿಲ್ಲೆಗಳಲ್ಲಿ ಕೈಗಾರಿಕಾ ಪ್ರದೇಶಗಳನ್ನು ಅಭಿವೃದ್ಧಿಪಡಿಸಲು ನಿರ್ಧರಿಸಲಾಗಿದೆ ;

(ಆ) ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ (KIADB) ವತಿಯಿಂದ ಒಂದು ಪ್ರದೇಶವನ್ನು ಕೈಗಾರಿಕಾ ಪ್ರದೇಶವಾಗಿ ಅಭಿವೃದ್ಧಿಪಡಿಸಲು ಇರುವ ಮಾನದಂಡಗಳೇನು ; (ವಿವರ ಒದಗಿಸುವುದು)

(ಇ) ರಾಜ್ಯದಲ್ಲಿ ಹಿಂದುಳಿದ ಜಿಲ್ಲೆಗಳನ್ನು ವಿಶೇಷವಾಗಿ ಉತ್ತರ ಕರ್ನಾಟಕದ ಯಾವ ಯಾವ ಜಿಲ್ಲೆಗಳನ್ನು ಕೈಗಾರಿಕಾ ಪ್ರದೇಶಗಳಾಗಿ ಅಭಿವೃದ್ಧಿಪಡಿಸಲಾಗುವುದು ;

(ಈ) ಹೊಸ ಕೈಗಾರಿಕಾ ನೀತಿಯನ್ವಯ ಉತ್ತರ ಕರ್ನಾಟಕದ ಹಿಂದುಳಿದ ಜಿಲ್ಲೆಗಳಲ್ಲಿ ಕೈಗಾರಿಕಾ ಪ್ರದೇಶಗಳಾಗಿ ಅಭಿವೃದ್ಧಿಪಡಿಸಲು ಸರ್ಕಾರ ತೆಗೆದಕೊಂಡ ಕ್ರಮಗಳೇನು ; (ಪ್ರಗತಿಯು ಯಾವ ಹಂತದಲ್ಲಿದೆ)

(ಉ) ಯಾವ ಕಾಲಮಿತಿಯಲ್ಲಿ ಸದರಿ ಯೋಜನೆಗಳು ಅನುಷ್ಠಾನಗೊಂಡು ಸಕಾರಗೊಳ್ಳಲಿವೆ ? (ವಿವರ ಒದಗಿಸುವುದು)

## ಕೃಷಿ ಅಲ್ಪಾವಧಿ ಸಾಲದ ಬಡ್ಡಿ ಮನ್ನಾ ಸಂಬಂಧ ಬಾಕಿ ಮೊತ್ತ ಪಾವತಿ ಕುರಿತು

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–**

೬೮೩ (೮೧೬) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೃಷಿ ಅಲ್ಪಾವಧಿ ಸಾಲದ ಬಡ್ಡಿ ಮನ್ನಾ ಸಂಬಂಧ ಸರ್ಕಾರ ನೀಡಬೇಕಾಗಿರುವ ಬಾಕಿ ಮೊತ್ತವೆಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಆ) ಯಾವ ಕಾಲಮಿತಿಯಲ್ಲಿ ಸದರಿ ಬಾಕಿ ಮೊತ್ತವನ್ನು ಬಿಡುಗಡೆಗೊಳಿಸಲಾಗುವುದು ;

(ಇ) ಕೃಷಿ ಅಲ್ಪಾವಧಿ ಸಾಲಕ್ಕೆ ಶೂನ್ಯ ಬಡ್ಡಿ ದರದಲ್ಲಿ ಪ್ರಸಕ್ತ ನೀಡುತ್ತಿರುವ ಸಾಲದ ಗರಿಷ್ಠ ಮೊತ್ತವನ್ನು ಹೆಚ್ಚಿಸಲು ಸರ್ಕಾರ ಕ್ರಮವಹಿಸುವುದೇ ;

(ಈ) ಮಧ್ಯಮಾವಧಿ ಸಾಲಗಳಿಗೂ ಶೂನ್ಯ ಬಡ್ಡಿ ದರದಲ್ಲಿ ಸಾಲ ನೀಡಲು ಸರ್ಕಾರ ಕ್ರವಹಿಸುವುದೇ ?

## ಪೌರಾಡಳಿತ ಇಲಾಖೆಯಲ್ಲಿ ಖಾಲಿಯಿರುವ ಹುದ್ದೆಗಳ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :–**

೬೮೪ (೭೭೪) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪೌರಾಡಳಿತ ಇಲಾಖೆಯ ಪಟ್ಟಣ ಪಂಚಾಯತಿ, ಪುರಸಭೆ ಮತ್ತು ನಗರಸಭೆಗಳಲ್ಲಿ ಮಂಜೂರಾದ ಒಟ್ಟು ಹುದ್ದೆಗಳ ಸಂಖ್ಯೆ ಎಷ್ಟು ; (ವೃಂದವಾರು, ತಾಲ್ಲೂಕುವಾರು ವಿವರ ನೀಡುವುದು)

(ಆ) ಅವುಗಳಲ್ಲಿ ಖಾಯಂ, ಗುತ್ತಿಗೆ ಆಧಾರದ ಮೇಲೆ ಮತ್ತು ದಿನಗೂಲಿ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವವರ ಸಂಖ್ಯೆ ಎಷ್ಟು ;

(ಇ) ಪ್ರಸ್ತುತ ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು ; (ವೃಂದವಾರು, ತಾಲ್ಲೂಕುವಾರು ವಿವರ ನೀಡುವುದು)

(ಈ) ಖಾಲಿಯಿರುವ ಹುದ್ದೆಗಳನ್ನು ನೇಮಕ ಮಾಡಿಕೊಳ್ಳಲು ಸರ್ಕಾರ ಕ್ರಮಕೈಗೊಂಡಿದೆಯೇ ;

(ಉ) ಹಾಗಿದ್ದಲ್ಲಿ, ಸದರಿ ನೇಮಕಾತಿ ಪ್ರಕ್ರಿಯೆಗಳು ಪ್ರಸ್ತುತ ಯಾವ ಹಂತದಲ್ಲಿವೆ; ಯಾವ ಕಾಲಮಿತಿಯಲ್ಲಿ ನೇಮಕಾತಿ ಪ್ರಕ್ರಿಯೆಗಳನ್ನು ಪೂರ್ಣಗೊಳಿಸಲಾಗುವುದು ;

(ಊ) ನೇಮಕಾತಿ ಮಾಡಿಕೊಳ್ಳದಿರಲು ಕಾರಣಗಳೇನು ?



## ಕೋಲಾರ ನಗರಸಭೆ ಪೌರಾಯುಕ್ತರು/ಅಧಿಕಾರಿ/ನೌಕರರ ಕುಟುಂಬದಲ್ಲಿ ನಿಧನ ನಂತರದ ಸೌಲಭ್ಯ ಒದಗಿಸುವ ಬಗ್ಗೆ

**ಡಾ॥ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೬೮೫ (೮೩೭) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನಗರಸಭೆಗಳಲ್ಲಿ ಪೌರಾಯುಕ್ತರ ಹುದ್ದೆಯಿಂದ ಹಿಡಿದು ವಿವಿಧ ಹುದ್ದೆಗಳಲ್ಲಿ ಕಾರ್ಯನಿರ್ವಹಿಸಿರುವ ಹಾಗೂ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ/ನೌಕರರುಗಳಿಂದ ಆರ್ಥಿಕ ನಷ್ಟ ಉಂಟಾದಾಗ ಅವರುಗಳ ಮೇಲೆ, ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಯ ನಿಯಮ ೧೦೦(೨)ರ ಪ್ರಕಾರ ಆ ಅಧಿಕಾರಿ/ನೌಕರರು ನಿಧನ ಹೊಂದಿದ ನಂತರವೂ ವಿಚಾರಣೆ ನಡೆಸಲು ಅವಕಾಶವಿದೆಯೇ ;

(ಆ) ಇಲ್ಲದಿದ್ದಲ್ಲಿ, ಕೋಲಾರ ನಗರಸಭೆಗೆ ಸಂಬಂಧಿಸಿದಂತೆ ಪೌರಾಯುಕ್ತರು ಹಾಗೂ ಇತರೆ ಅಧಿಕಾರಿಗಳು ಆರ್ಥಿಕ ನಷ್ಟ ಉಂಟು ಮಾಡಿದ್ದಾರೆಂದು ತಿಳಿಸಿ, ಅವರುಗಳ ಮೇಲೆ ಇಲಾಖಾ ವಿಚಾರಣೆ ಕೈಗೊಂಡ ನಂತರ ಅವರಲ್ಲಿ ಯಾರಾದರೂ ನಿಧನ ಹೊಂದಿದ್ದಲ್ಲಿ, ಅಂತಹ ಅಧಿಕಾರಿಗಳ ಮೇಲೆ ಇಲಾಖಾ ವಿಚಾರಣೆಯನ್ನು ಕೈಬಿಡಲಾಗಿದೆಯೇ ;

(ಇ) ಕೋಲಾರ ನಗರಸಭೆಗೆ ಸಂಬಂಧಿಸಿದಂತೆ ಇಲಾಖಾ ವಿಚಾರಣೆಗೆ ಒಳಪಟ್ಟ ಪೌರಾಯುಕ್ತರು/ಅಧಿಕಾರಿಗಳು ನಿಧನ ಹೊಂದಿದ ನಂತರ ಅವರ ಕುಟುಂಬಕ್ಕೆ ನಿಧನ ನಂತರದ ಎಲ್ಲಾ ಸೌಲಭ್ಯಗಳನ್ನು ಒದಗಿಸಲಾಗಿದೆಯೇ; ಇಲ್ಲದಿದ್ದಲ್ಲಿ, ವಿಳಂಬಕ್ಕೆ ಕಾರಣಗಳೇನು; ಹಾಗೂ ಕರ್ನಾಟಕ ನಾಗರೀಕ ಸೇವಾ

ನಿಯಮಗಳಲ್ಲಿ ಈ ರೀತಿಯಾಗಿ ಅಧಿಕಾರಿ/ನೌಕರರಿಗೆ ನಿಧನ ನಂತರದ ಸೌಲಭ್ಯಗಳನ್ನು ಅವರ ಕುಟುಂಬದವರಿಗೆ ಬಿಡುಗಡೆ ಮಾಡಲು ಇರುವ ಮಾನದಂಡಗಳೇನು ; (ಆದೇಶದ ಪ್ರತಿಗಳನ್ನು ಒದಗಿಸುವುದು)

(ಈ) ಕೋಲಾರ ನಗರಸಭೆಯಲ್ಲಿ ಕಳೆದ ೧೦ ವರ್ಷಗಳಿಂದ ಕೆ.ಎಸ್.ಎಸ್.ಐ.ಐ.ಡಿ.ಸಿ. ವತಿಯಿಂದ ನಿಯೋಜನೆ ಮೇರೆಗೆ ಪೌರಯುಕ್ತರಾಗಿ/ನೌಕರರಾಗಿ ಕಾರ್ಯನಿರ್ವಹಿಸಿದವರ ವಿವರ ನೀಡುವುದು ; ಹಾಗೂ ಮಾತೃ ಇಲಾಖೆಗೆ ಹಿಂದಿರುಗಿ ನಂತರ ಅವರು ನಿಧನ ಹೊಂದಿದ್ದಲ್ಲಿ, ಅವರ ಕುಟುಂಬದವರಿಗೆ ಆರ್ಥಿಕ ಸೌಲಭ್ಯ ಬಿಡುಗಡೆ ಮಾಡುವ ಸಲುವಾಗಿ ಕೋಲಾರ ನಗರಸಭೆಯಿಂದ ಅವರ ಮಾತೃ ಇಲಾಖೆಗೆ ಎನ್.ಓ.ಸಿ ನೀಡಲಾಗಿದೆಯೇ ; ಇಲ್ಲದಿದ್ದಲ್ಲಿ, ಕಾರಣಗಳ ಸಮೇತ ಮಾಹಿತಿ ಒದಗಿಸುವುದು ?

## ಕೆ.ಜಿ.ಎಫ್. ಚಿನ್ನದ ಗಣಿ ಮುಚ್ಚಿರುವ ಕುರಿತು

**ಡಾ॥ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೬೮೬ (೮೨೫) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೋಲಾರ ಜಿಲ್ಲೆಯಲ್ಲಿನ ವಿಶ್ವ ಪ್ರಸಿದ್ಧಿಯಾದ ಕೆ.ಜಿ.ಎಫ್.ನ ಚಿನ್ನದ ಗಣಿಯನ್ನು ಮುಚ್ಚಲು ಕಾರಣಗಳೇನು ; ಇದರಿಂದ ಇದುವರೆವಿಗೂ ಆದ ನಷ್ಟದ ವಿವರ ಒದಗಿಸುವುದು ;

(ಆ) ಕೋಲಾರ ಚಿನ್ನದ ಗಣಿ ಪುನಶ್ಚೇತನದ ಪ್ರಕ್ರಿಯೆ ಸರ್ಕಾರದ ಮುಂದಿದೆಯೇ ;

(ಇ) ಹಾಗಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಈ ಚಿನ್ನದ ಗಣಿಯನ್ನು ಪುನರ್ ಪ್ರಾರಂಭಿಸಲಾಗುವುದು ?



## ಎಸ್.ಎಫ್.ಸಿ ಅನುದಾನ ಬಳಕೆ ಬಗ್ಗೆ

**ಡಾ॥ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೬೮೭ (೮೪೦) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೯–೨೦ನೇ ಸಾಲಿಗೆ ಎಸ್.ಎಫ್.ಸಿ ಅನುದಾನದಡಿಯಲ್ಲಿ ಪೌರಾಡಳಿತ ಇಲಾಖೆಗೆ ಬಿಡುಗಡೆಯಾಗಿರುವ ಮೊತ್ತ ಎಷ್ಟು ;

(ಆ) ಈ ಹಣವನ್ನು ಯಾವ ಮಾನದಂಡದ ಅಡಿಯಲ್ಲಿ ಎಲ್ಲಾ ಪಟ್ಟಣ ಪಂಚಾಯ್ತಿ, ಪುರಸಭೆ, ನಗರಸಭೆಗಳಿಗೆ ಹಂಚಿಕೆ ಮಾಡಲಾಗಿದೆ ;

(ಇ) ಈ ಹಂಚಿಕೆಯಲ್ಲಿ ಡಾ: ನಂಜುಂಡಪ್ಪ ವರದಿ ಅನ್ವಯ ಅತೀ ಹಿಂದುಳಿದ ತಾಲ್ಲೂಕುಗಳಿಗೆ ವಿಶೇಷವಾದ ಒತ್ತು ನೀಡಲಾಗಿದೆಯೇ ? (ವಿವರಗಳನ್ನು ಒದಗಿಸುವುದು)

## ರೇಷ್ಮೆ ಗೂಡಿಗೆ ನೀಡುತ್ತಿರುವ ಪ್ರೋತ್ಸಾಹ ಧನದ ಬಗ್ಗೆ

**ಡಾ॥ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೬೮೮ (೮೩೯) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರೇಷ್ಮೆ ಗೂಡಿಗೆ ಸರ್ಕಾರ ನೀಡುತ್ತಿರುವ ಪ್ರೋತ್ಸಾಹ ಧನ ಎಷ್ಟು ;

(ಆ) ಇದುವರೆವಿಗೂ ಸರ್ಕಾರ ನೀಡಿರುವ ಪ್ರೋತ್ಸಾಹ ಧನ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಇ) ರೇಷ್ಮೆ ಬೆಳೆ ವಿಸ್ತರಣೆಗೆ ಸರ್ಕಾರ ನೀಡುತ್ತಿರುವ ಪ್ರೋತ್ಸಾಹ ದಾಯಕ ಯೋಜನೆಗಳು ಯಾವುವು ?

## ಹೊಸ ಡಿ.ಸಿ.ಸಿ. ಬ್ಯಾಂಕ್ ಸ್ಥಾಪನೆ ಬಗ್ಗೆ

**ಡಾ॥ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೬೭೯ (೮೩೮) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೋಲಾರ ಡಿ.ಸಿ.ಸಿ. ಬ್ಯಾಂಕ್‌ನ್ನು ವಿಭಜನೆ ಮಾಡಿ ಚಿಕ್ಕಬಳ್ಳಾಪುರ ಜಿಲ್ಲೆಗೆ ಪ್ರತ್ಯೇಕವಾದ ಡಿ.ಸಿ.ಸಿ. ಬ್ಯಾಂಕ್‌ನ್ನು ಸ್ಥಾಪಿಸಲು ಸರ್ಕಾರ ಇಚ್ಚಿಸಿದೆಯೇ ;

(ಆ) ಹಾಗಿದ್ದರೆ, ಯಾವ ದಿನಾಂಕದಿಂದ ಈ ಹೊಸ ಡಿ.ಸಿ.ಸಿ ಬ್ಯಾಂಕ್‌ನ್ನು ಸ್ಥಾಪನೆ ಮಾಡಲಾಗುವುದು;

(ಇ) ಕೋಲಾರ ಡಿ.ಸಿ.ಸಿ. ಬ್ಯಾಂಕ್‌ನಲ್ಲಿ ನಡೆಯುವ ಯಾವುದೇ ಕಾರ್ಯಕ್ರಮಗಳಿಗೆ ಜನಪ್ರತಿನಿಧಿಗಳನ್ನು ಆಹ್ವಾನಿಸದೇ ಶಿಷ್ಟಾಚಾರ ಉಲ್ಲಂಘನೆ ವಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದರೆ, ಅಂತಹ ಪ್ರಕರಣಗಳ ಬಗ್ಗೆ ಕೈಗೊಂಡ ಕ್ರಮಗಳಾವುವು ? (ವಿವರಗಳನ್ನು ನೀಡುವುದು)

## ಕೆ.ಎಂ.ಎಫ್ ನಿಂದ ಸರಬರಾಜು ಆಗುತ್ತಿರುವ ಹಾಲಿನ ಉತ್ಪನ್ನಗಳ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೮೦ (೮೪೩) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನಂದಿನಿ ಉತ್ಪನ್ನಗಳನ್ನು ಮನೆ ಬಾಗಿಲಿಗೆ ತಲುಪಿಸಲು ನಂದಿನಿ ಸಂಚಾರಿ ವಾಹನಕ್ಕೆ ಚಾಲನೆ ನೀಡಲಾಗಿದ್ದು, ಈ ಯೋಜನೆಯು ಯಶಸ್ವಿಯಾಗಿದೆಯೇ ;



(ಆ) ಯಶಸ್ವಿಯಾಗಿದ್ದಲ್ಲಿ, ಇತರೆ ಜಿಲ್ಲೆಗಳಲ್ಲೂ ಸಂಚಾರಿ ವಾಹನಗಳಿಗೆ ಚಾಲನೆ ನೀಡುವ ಆಲೋಚನೆಯಿದೆಯೇ ;

(ಇ) ನಂದಿನಿ ಸಂಚಾರಿ ವಾಹನಗಳಿಂದ ವ್ಯಾಪಾರ ನಡೆಸಲು ಇದರ ಪ್ರಾಂಚೈಸಿಯನ್ನು ಪಡೆಯಲು ಅನುಸರಿಸಬೇಕಾದ ಕ್ರಮಗಳೇನು ;

(ಈ) ನಂದಿನಿ ಬೂತ್/ಪಾರ್ಲರ್‌ಗಳಲ್ಲಿ ಕೇವಲ ಬಾದಾಮಿ ಹಾಲು ಅಥವಾ ಕಾಫಿ ಮಾತ್ರ ಮಾರಲು ಕಡ್ಡಾಯ ಆದೇಶವೇನಾದರೂ ಇದೆಯೇ; ಅಥವಾ ಟೀ, ಕಷಾಯಗಳನ್ನು ಮಾರಬಹುದೇ ;

(ಉ) ರಾಜ್ಯದಲ್ಲಿರುವ ಒಟ್ಟು ನಂದಿನಿ ಪಾರ್ಲರ್ ಕೆ.ಎಂ.ಎಫ್.ನಿಂದ ಯಾವ ಯಾವ ರಾಜ್ಯಗಳಿಗೆ ಎಷ್ಟು ಪ್ರಮಾಣದಲ್ಲಿ ಹಾಲನ್ನು ಸರಬರಾಜು ಮಾಡಲಾಗುತ್ತಿದೆ ?

## ರಾಜ್ಯದಲ್ಲಿರುವ ನ್ಯಾಯಬೆಲೆ ಅಂಗಡಿಗಳ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೮೧ (೮೪೧) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಒಟ್ಟು ನ್ಯಾಯಬೆಲೆ ಅಂಗಡಿಗಳ ಸಂಖ್ಯೆ ಎಷ್ಟು ;

(ಆ) ನ್ಯಾಯಬೆಲೆ ಅಂಗಡಿಗಳ ಬಾಡಿಗೆಯನ್ನು ಸರ್ಕಾರವೇ ಭರಿಸುತ್ತದೆಯೇ ; ಹಾಗಿದ್ದಲ್ಲಿ, ಭರಿಸುವ ಶುಲ್ಕವೆಷ್ಟು ;

(ಇ) ಗ್ರಾಮೀಣ ಪ್ರದೇಶದಲ್ಲಿ ನ್ಯಾಯಬೆಲೆ ಅಂಗಡಿಯನ್ನು ಸರ್ಕಾರದ ಅನುಮತಿ ಪಡೆದು ನಡೆಸಬಹುದೇ, ಹಾಗಿದ್ದಲ್ಲಿ, ಅದಕ್ಕೆ ಇರುವ ನಿಯಮಗಳು ಹಾಗೂ ಮಾನದಂಡಗಳೇನು ;

(ಈ) ಎಷ್ಟು ರೇಷನ್ ಕಾರ್ಡ್‌ಗಳಿಗೆ ಅಥವಾ ಎಷ್ಟು ಕುಟುಂಬಗಳಿಗೆ ಒಂದು ನ್ಯಾಯಬೆಲೆ ಅಂಗಡಿಯನ್ನು ಸ್ಥಾಪಿಸಲಾಗುತ್ತದೆ ?

## ಕೈಗಾರಿಕಾ ಉದ್ಯಮಗಳನ್ನು ಉತ್ತೇಜಿಸುವ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೯೨ (೮೪೪) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೋವಿಡ್ ನಂತರ ಕೈಗಾರಿಕಾ ಉದ್ಯಮವನ್ನು ಉತ್ತೇಜಿಸಲು ಸರ್ಕಾರ ಕೈಗೊಂಡ ಕ್ರಮವೇನು ; (ವಿವರ ನೀಡುವುದು)

(ಆ) ಕೆ.ಐ.ಎ.ಡಿ.ಬಿ ವತಿಯಿಂದ ಪ್ರಸ್ತುತ ಸಾಲಿನಲ್ಲಿ ಎಷ್ಟು ವಿಸ್ತೀರ್ಣದ ಜಮೀನನ್ನು ಕೈಗಾರಿಕಾ ಉದ್ದೇಶಕ್ಕಾಗಿ ಭೂಸ್ವಾಧೀನ ಪಡಿಸಿಕೊಂಡಿದೆ ;

(ಇ) ಈ ರೀತಿಯಾಗಿ ಭೂಸ್ವಾಧೀನ ಪಡಿಸಿಕೊಂಡ ವಿಸ್ತೀರ್ಣದಲ್ಲಿ ಎಷ್ಟು ಜಮೀನನ್ನು ಕೈಗಾರಿಕಾ ಉದ್ದೇಶಕ್ಕೆ ನೀಡಲಾಗಿದೆ; ಇದಕ್ಕೆ ನಿಗದಿಪಡಿಸಿದ ದರವೆಷ್ಟು ? (ಜಿಲ್ಲಾವಾರು ವಿವರ ನೀಡುವುದು)

## ಪುರಸಭೆ ಮತ್ತು ನಗರಸಭೆ ವ್ಯಾಪ್ತಿಗೆ ಒಳಪಡುವ ಆಸ್ತಿಯ ಕುರಿತು

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೯೩ (೮೪೫) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪೌರಾಡಳಿತ ಇಲಾಖೆವತಿಯಿಂದ ರಾಜ್ಯದ ಪುರಸಭೆ ಮತ್ತು ನಗರಸಭೆಗಳ ವ್ಯಾಪ್ತಿಗೆ ಒಳಪಡುವ ಆಸ್ತಿಗಳನ್ನು ಜಿ.ಐ.ಎಸ್. ತಂತ್ರಾಂಶದಡಿ ಮಾಹಿತಿಯನ್ನು ಕ್ರೋಢೀಕರಿಸುವ ಯೋಜನೆಗೆ ಸರ್ಕಾರವು ಅನುಮೋದನೆ ನೀಡಿದೆಯೇ ;



(ಆ) ನೀಡಿದ್ದಲ್ಲಿ, ಈ ಯೋಜನೆಯನ್ನು ಯಾವಾಗ ಪ್ರಾರಂಭಿಸಲಾಗುವುದು ; (ಯೋಜನೆಯ ಪೂರ್ಣ ವಿವರ ಒದಗಿಸುವುದು)

(ಇ) ಈ ಕಾರ್ಯಕ್ಕಾಗಿ ಒಟ್ಟು ಎಷ್ಟು ಮೊತ್ತ ಮೀಸಲಿಡಲಾಗಿದೆ ;

(ಈ) ರಾಜ್ಯದ ಪುರಸಭೆ ಮತ್ತು ನಗರಸಭೆ ವ್ಯಾಪ್ತಿಗೆ ಒಳಪಡುವ ಆಸ್ತಿಗಳನ್ನು ಈಗಾಗಲೇ ಗುರುತಿಸಲಾಗಿದೆಯೇ; ಗುರುತಿಸಿದ್ದಲ್ಲಿ, ನಗರಸಭೆ ಮತ್ತು ಪುರಸಭೆವಾರು ಮಾಹಿತಿ ನೀಡುವುದು ;

(ಉ) ಪುರಸಭೆ ಮತ್ತು ನಗರಸಭೆ ವ್ಯಾಪ್ತಿಗೆ ಒಳಪಡುವ ಆಸ್ತಿಗಳನ್ನು ಯಾವ ರೀತಿ ವಿಂಗಡಿಸಲಾಗಿದೆ ? (ವಾಣಿಜ್ಯ, ವಸತಿ ಮತ್ತು ಇತರೆ ವಿಂಗಡಣೆಯ ಪೂರ್ಣ ವಿವರ ನೀಡುವುದು)

## ಮೈಸೂರು ಲ್ಯಾಂಪ್ಸ್ ಸಂಸ್ಥೆಗಳ ಕುರಿತು

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :–**

೬೯೪ (೮೧೮) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು ಲ್ಯಾಂಪ್ಸ್ ಸಂಸ್ಥೆಯನ್ನು ಮುಚ್ಚಲಾಗಿದೆಯೇ ;

(ಆ) ಹಾಗಿದ್ದಲ್ಲಿ, ಸಂಸ್ಥೆಯಲ್ಲಿ ಉಳಿದಿರುವ ಸಿಬ್ಬಂದಿ ಎಷ್ಟು; ಆ ಸಿಬ್ಬಂದಿಗಳನ್ನು ಯಾವ ಯಾವ ಸಂಸ್ಥೆಗಳಿಗೆ ನಿಯೋಜನೆ ಮಾಡಲಾಗಿದೆ ; (ವಿವರ ನೀಡುವುದು)

(ಇ) ಮೈಸೂರು ಲ್ಯಾಂಪ್ಸ್ ಸಂಸ್ಥೆಯಲ್ಲಿ ನೌಕರರು ತಮ್ಮ ಡಿ.ಎ. ಹಾಗೂ ಇನ್ನಿತರೆ ಸೌಲಭ್ಯಗಳನ್ನು ಪಡೆಯದೇ ಸೇವೆ ಸಲ್ಲಿಸಿರುವುದನ್ನು ಪರಿಗಣಿಸಿ, ಇವರಿಗೆ ಸರ್ಕಾರದಿಂದ ನೆರವು ನೀಡಲಾಗುವುದೇ ;

(ಈ) ಮೈಸೂರು ಲ್ಯಾಂಪ್ಸ್ ಸಂಸ್ಥೆಯ ಒಟ್ಟು ಆಸ್ತಿಮೌಲ್ಯ ಎಷ್ಟು; ಈ ಆಸ್ತಿಯನ್ನು ಯಾವ ಸಂಸ್ಥೆಗೆ ಪರಭಾರೆ ಮಾಡಲಾಗಿದೆ; ನೌಕರರು ಹಾಗೂ ಷೇರುದಾರರಿಗೆ ನೀಡಬೇಕಾಗಿರುವ ಹಣದ ಮೊತ್ತ ಎಷ್ಟು ? (ವಿವರ ನೀಡುವುದು)

## ಹೊಸದಾಗಿ ಸೃಜಿಸಲಾಗಿರುವ ನಗರ ಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯಿತಿಗಳ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :–**

೬೯೫ (೮೦೦) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಹೊಸದಾಗಿ ಸೃಜಿಸಲಾಗಿರುವ ಹೊಸ ನಗರ ಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯಿತಿಗಳಾವುವು ;

(ಆ) ಪ್ರತಿಯೊಂದು ಸಂಸ್ಥೆಗಳಿಗೆ ನೀಡಿರುವ ನೆರವು ಹಾಗೂ ಸಿಬ್ಬಂದಿಗಳೇಷ್ಟು ? (ವಿವರ ಒದಗಿಸುವುದು)

## ಅನರ್ಹ ಫಲಾನುಭವಿಗಳು ಕಾರ್ಡ್ ಹೊಂದಿರುವ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮ ನಿರ್ದೇಶನ ಹೊಂದಿದವರು) :–**

೬೯೬ (೭೯೮) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಿ.ಪಿ.ಎಲ್ ಹಾಗೂ ಎ.ಪಿ.ಎಲ್ ಕಾರ್ಡ್‌ದಾರರಿಗೆ ಎಷ್ಟು ಪ್ರಮಾಣದಲ್ಲಿ ದವಸ ಧಾನ್ಯಗಳು ಹಾಗೂ ಇನ್ನಿತರೆ ವಸ್ತುಗಳನ್ನು ವಿತರಿಸಲಾಗಿದೆ;



(ಆ) ರಾಜ್ಯದಲ್ಲಿ ಬಿ.ಪಿ.ಎಲ್ ಕಾರ್ಡ್‌ದಾರರ ಸಂಖ್ಯೆ ಎಷ್ಟು;

(ಇ) ಆರ್ಥಿಕವಾಗಿ ಸಬಲರಾಗಿರುವವರು ಬಿ.ಪಿ.ಎಲ್ ಕಾರ್ಡ್ ಹೊಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳಾವುವು ?

## ವಿಜಯಪುರ ಜಿಲ್ಲೆಯ ತೋಟಗಾರಿಕೆ ಬೆಳೆಯ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮ ನಿರ್ದೇಶನ ಹೊಂದಿದವರು) :–**

೬೯೭ (೭೯೯) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಜಯಪುರ ಜಿಲ್ಲೆಯಲ್ಲಿ ಯಾವ ಯಾವ ತೋಟಗಾರಿಕಾ ಬೆಳೆಗಳನ್ನು ಬೆಳೆಯಲಾಗುತ್ತಿದೆ; ಯಾವ ಯಾವ ತೋಟಗಾರಿಕೆ ಬೆಳೆಗಳಿಗೆ ಬೆಂಬಲ ಬೆಲೆ ನೀಡಲಾಗುತ್ತಿದೆ;

(ಆ) ಕಳೆದ ವರ್ಷ ತೋಟಗಾರಿಕೆ ಇಲಾಖೆಯಿಂದ ನೀಡಿರುವ ಕೃಷಿ ಪರಿಕರ ಹಾಗೂ ಇತರೆ ಸಬ್ಸಿಡಿಗಳೆಷ್ಟು? (ತಾಲ್ಲೂಕುವಾರು ವಿವರ ನೀಡುವುದು)

## ಸ್ಮಾರ್ಟ್‌ಸಿಟಿ ಕಂಪನಿಯ ಯೋಜನೆಯಡಿಯಲ್ಲಿ ಬಿಡುಗಡೆಯಾದ ಅನುದಾನ

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೯೮ (೭೯೦) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸ್ಮಾರ್ಟ್‌ಸಿಟಿ ಕಂಪನಿಯ ಯೋಜನೆಯಡಿ ಬಿಡುಗಡೆಯಾದ ಅನುದಾನದಲ್ಲಿ ಯಾರ ಸಲಹೆ ಮೇರೆಗೆ ಕಾಮಗಾರಿ ಕೈಗೊಳ್ಳಲಾಗುತ್ತಿದೆ ; ಸ್ಥಳೀಯ ಚುನಾಯಿತ ವಾರ್ಡ್ ಸದಸ್ಯರ

ಗಮನಕ್ಕೆ ತರದೆ ಕಾಮಗಾರಿಗಳನ್ನು ಕೈಗೊಳ್ಳಲಾಗುತ್ತಿದೆಯೇ ; ಈ ಬಗ್ಗೆ ಸ್ಥಳೀಯ ಸಂಸ್ಥೆಯ ಜೊತೆ ಚರ್ಚಿಸಲಾಗಿದೆಯೇ ; (ವಿವರ ನೀಡುವುದು)

(ಆ) ಸ್ಮಾರ್ಟ್‌ಸಿಟಿ ಕಂಪನಿಯ ಆಡಳಿತ ವ್ಯವಸ್ಥೆಗೆ ಒಂದು ಕಂಪನಿಗೆ ತಿಂಗಳೊಂದಕ್ಕೆ ತಗಲುವ ವೆಚ್ಚವೆಷ್ಟು ; (ವಿವರ ನೀಡುವುದು)

(ಇ) ಸ್ಮಾರ್ಟ್‌ಸಿಟಿಯಲ್ಲಿ ಕೈಗೊಳ್ಳುವ ಕಾಮಗಾರಿಗೂ ಮತ್ತು ಸ್ಥಳೀಯ ಆಡಳಿತ ಸಂಸ್ಥೆಗೂ ಸಂಬಂಧ ಇಲ್ಲವೆಂಬ ದೂರುಗಳಿದ್ದು, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ?

## ಪಡಿತರ ಚೀಟಿಗಳ ಫಲಾನುಭವಿಗಳ ಬಗ್ಗೆ

**ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನ ಸಭೆಯಿಂದ ಚುನಾಯಿತರಾದವರು ):–**

೬೯ (ಲ೩೪) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿ ಬಿ.ಪಿ.ಎಲ್ ಮತ್ತು ಎ.ಪಿ.ಎಲ್ ಪಡಿತರ ಕಾರ್ಡುದಾರರ ಸಂಖ್ಯೆ ಎಷ್ಟು; (ವಿಧಾನ ಸಭಾ ಕ್ಷೇತ್ರವಾರು ವಿವರ ನೀಡುವುದು)

(ಆ) ೨೦೧೯–೨೦೨೦ನೇ ಸಾಲಿನಲ್ಲಿ ಎಷ್ಟು ಫಲಾನುಭವಿಗಳಿಗೆ ಬಿ.ಪಿ.ಎಲ್ ಹಾಗೂ ಎ.ಪಿ.ಎಲ್ ಕಾರ್ಡುಗಳನ್ನು ನೀಡಲಾಗಿದೆ; (ಗ್ರಾಮ ಮತ್ತು ವಿಧಾನ ಸಭಾ ಕ್ಷೇತ್ರವಾರು ಸ್ಪಷ್ಟ ವಿವರ ಒದಗಿಸುವುದು)

(ಇ) ೨೦೧೯–೨೦೨೦ ನೇ ಸಾಲಿನಲ್ಲಿ ಪಡಿತರ ಚೀಟಿಗಳಿಗೆ ಸ್ವೀಕರಿಸಿದ ಒಟ್ಟು ಅರ್ಜಿಗಳು ಎಷ್ಟು;



(ಈ) ಇದರಲ್ಲಿ ಎಷ್ಟು ಫಲಾನುಭವಿಗಳಿಗೆ ಕಾರ್ಡುಗಳನ್ನು ನೀಡಲಾಗಿದೆ; (ಫಲಾನುಭವಿಗಳ ಹೆಸರು, ಗ್ರಾಮ ಕ್ಷೇತ್ರವಾರು ಮಾಹಿತಿ ನೀಡುವುದು)

(ಉ) ಪಡಿತರ ಕಾರ್ಡುದಾರರಿಗೆ ಆಹಾರ ವಿತರಣೆ ಕೇಂದ್ರ (ಅಂಗಡಿ) ಗ್ರಾಮದಿಂದ ಎಷ್ಟು ದೂರದಲ್ಲಿರಬೇಕು? (ಸಂಪೂರ್ಣ ವಿವರ ನೀಡುವುದು)

## ಬೀದರ್ ನಗರಸಭೆ ಕುರಿತು

**ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನ ಸಭೆಯಿಂದ ಚುನಾಯಿತರಾದವರು ):–**

೭೦೦ (ಲ೩೬) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ನಗರಸಭೆಯ ವ್ಯಾಪ್ತಿಯಲ್ಲಿ ಸರ್ಕಾರದ ಒಡೆತನದಲ್ಲಿರುವ ಕೊಳವೆ ಬಾವಿಗಳ ಸಂಖ್ಯೆ ಎಷ್ಟು; ಹಾಗೂ ಇವುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಮತ್ತು ಕಾರ್ಯನಿರ್ವಹಿಸದಿರುವ ಕೊಳವೆ ಬಾವಿಗಳ ಸಂಖ್ಯೆ ಎಷ್ಟು; (ವಾರ್ಡ್‌ಗಳವಾರು ಮತ್ತು ಕಳೆದ ೩ ವರ್ಷಗಳಲ್ಲಿ ಖರ್ಚು ಮಾಡಲಾದ ಅನುದಾನವೆಷ್ಟು; ಸ್ಪಷ್ಟ ಮಾಹಿತಿ ನೀಡುವುದು)

(ಆ) ಬೀದರ್ ನಗರಸಭೆಯ ವ್ಯಾಪ್ತಿಯಲ್ಲಿ ಹಲವಾರು ಕಡೆಗಳಲ್ಲಿ ಚರಂಡಿ ನೀರು ಹೊರ ಹಾದು ಹೋಗದೇ ಬಾವಿಗಳಲ್ಲಿ ಸೇರುತ್ತಿರುವ ಬಗ್ಗೆ ಕ್ರಮ ಕೈಗೊಳ್ಳದ ಅಧಿಕಾರಿಗಳ ವಿರುದ್ದ ಸರ್ಕಾರ ಕೈಗೊಂಡ ಕ್ರಮಗಳೇನು;

(ಇ) ಹಾಗಿದ್ದಲ್ಲಿ, ಚರಂಡಿ ನೀರು ಬಾವಿಗಳಿಗೆ ಹೋಗದಂತೆ ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳೇನು? (ಮಾಹಿತಿ ನೀಡುವುದು)

## ರಾಜ್ಯದ ಪ್ರಮುಖ ನಗರಗಳ ಮೂಲಸೌಕರ್ಯಗಳ ಕುರಿತು

**ಶ್ರೀ ಹೆಚ್.ಎಂ. ರಮೇಶ ಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು):–**

೭೦೧ (೮೨೦) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಪ್ರಮುಖ ನಗರಗಳ ಮೂಲಸೌಕರ್ಯ ಅಭಿವೃದ್ಧಿಗಾಗಿ ಪ್ರಸಕ್ತ ಸಾಲಿನಲ್ಲಿ ಮೀಸಲಿಟ್ಟ ಅನುದಾನವೆಷ್ಟು; (ಅಂಕಿ–ಅಂಶ ನೀಡುವುದು)

(ಆ) ರಾಜ್ಯದ ವಿವಿಧ ನಗರಗಳಲ್ಲಿ ರಸ್ತೆ ಕಾಮಗಾರಿಗಳು ನೆನೆಗುದಿಗೆ ಬಿದ್ದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಅಪೂರ್ಣಗೊಂಡ ಕಾಮಗಾರಿಗಳ ಸಂಪೂರ್ಣ ಮಾಹಿತಿ ನೀಡುವುದು;

(ಇ) ರಸ್ತೆ ಮತ್ತು ಮೂಲಸೌಕರ್ಯ ಕಾಮಗಾರಿಯ ಗುತ್ತಿಗೆದಾರರು ವಿವಿಧ ಯೋಜನೆಗಳಲ್ಲಿ ಕಳಪೆ ಕಾಮಗಾರಿಗಳನ್ನು ಕೈಗೊಂಡು, ಬಿಲ್‌ನ ಮೊತ್ತ ಪಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಅಂತಹ ಗುತ್ತಿಗೆದಾರರ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳೇನು?

## ರಾಜ್ಯದ ಅಕ್ರಮ ಮರಳುಗಣಿಗಾರಿಕೆ ಕುರಿತು

**ಶ್ರೀ ಹೆಚ್.ಎಂ. ರಮೇಶ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೦೨ (೮೨೧) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–



(ಅ) ಅಕ್ರಮ ಮರಳು ಗಣಿಗಾರಿಕೆ ಮತ್ತು ಅಕ್ರಮ ಮರಳು ಸಾಗಾಣಿಕೆ ರಾಜಾರೋಷವಾಗಿ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಅದನ್ನು ತಡೆಯಲು ಸರ್ಕಾರ ಕೈಗೊಂಡ ಕ್ರಮಗಳೇನು;

(ಆ) ಮರಳು ಗಣಿಗಾರಿಕೆ ವಿಷಯದಲ್ಲಿ ಸರ್ಕಾರದ ನಿಯಮಾವಳಿಗಳು ಅನುಷ್ಠಾನಗೊಂಡಿವೆಯೇ; (ವಿವರ ನೀಡುವುದು)

(ಇ) ಅಕ್ರಮ ಮರಳು ಗಣಿಗಾರಿಕೆ ತಡೆಯುವ ನಿಷ್ಠಾವಂತ ಅಧಿಕಾರಿಗಳ ರಕ್ಷಣೆಗೆ ಸರ್ಕಾರ ಕೈಗೊಂಡ ಕ್ರಮಗಳೇನು;

(ಈ) ಸರ್ಕಾರಿ ಅಧಿಕಾರಿಗಳ ಮೇಲೆ ಹಲ್ಲೆ ಮಾಡಿದವರ ವಿರುದ್ಧ ಸರ್ಕಾರ ಜರುಗಿಸಿದ ಕಾನೂನು ಕ್ರಮಗಳೇನು ? (ವಿವರ ನೀಡುವುದು)

## ರಾಜ್ಯದಲ್ಲಿ ಘನತ್ಯಾಜ್ಯ ನಿರ್ವಹಣೆ ಕುರಿತು

**ಶ್ರೀ ಹೆಚ್.ಎಂ. ರಮೇಶ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೦೩ (೮೨೨) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ನಗರ, ಸ್ಥಳೀಯ ಸಂಸ್ಥೆಗಳಲ್ಲಿ ವೈಜ್ಞಾನಿಕವಾಗಿ ಘನ ತ್ಯಾಜ್ಯ ನಿರ್ವಹಣೆಯನ್ನು ಮಾಡಲಾಗುತ್ತಿದೆಯೇ;

(ಆ) ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳ ಎಷ್ಟು ಘನ ತ್ಯಾಜ್ಯ ಘಟಕಗಳು ಕಾರ್ಯನಿರ್ವಹಿಸುತ್ತಿವೆ; (ಸಂಪೂರ್ಣ ವಿವರ ನೀಡುವುದು)

ಇ) ಘನ ತ್ಯಾಜ್ಯ ನಿರ್ವಹಣೆಗೆ ಸರ್ಕಾರದಿಂದ ಬಿಡುಗಡೆಯಾದ ಹಣ ಎಷ್ಟು; ಹಾಗೂ ಖರ್ಚಾದ ಹಣ ಎಷ್ಟು ? (ಸಂಪೂರ್ಣ ವಿವರ ನೀಡುವುದು)

## ಕರ್ನಾಟಕದಲ್ಲಿರುವ ಟೈಯರ್–೨ ನಗರಗಳ ಕುರಿತು

**ಶ್ರೀ ಎಸ್. ರುದ್ರೇಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು):–**

೭೦೪ (೭೮೭) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕದಲ್ಲಿರುವ ಟೈಯರ್–೨ ನಗರಗಳೆಷ್ಟು ;

(ಆ) ಟೈಯರ್–೨ ನಗರಗಳ ಮಾನ್ಯತೆಗೆ ಇರುವ ಮಾನದಂಡಗಳೇನು;

(ಇ) ಟೈಯರ್–೨ ನಗರಗಳನ್ನು ಗುರುತಿಸುವ ಮತ್ತು ಮಾನ್ಯತೆ ಪಡೆಯುವ ಯೋಜನೆ ಇದೆಯೇ ?

## ಕೆ.ಐ.ಎ.ಡಿ.ಬಿ/ಕೆ.ಎಸ್.ಎಸ್.ಐ.ಡಿ.ಸಿ ಸಂಸ್ಥೆಗಳಲ್ಲಿ ಹಂಚಿಕೆ ಮಾಡಿರುವ ಪ್ಲಾಟ್/ಶೆಡ್ಡುಗಳ ಕುರಿತು

**ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) :–**

೭೦೫ (೮೪೬) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೆ.ಐ.ಎ.ಡಿ.ಬಿ/ಕೆ.ಎಸ್.ಎಸ್.ಐ.ಡಿ.ಸಿ ಸಂಸ್ಥೆಗಳಿಂದ ಹಂಚಿಕೆ ಮಾಡಿರುವ ಪ್ಲಾಟ್/ಶೆಡ್ಡುಗಳ ಒಟ್ಟು ಮೊತ್ತದಲ್ಲಿ ಹಿಂದುಳಿದ ವರ್ಗಗಳ ವರ್ಗ ೧, ಪ್ರವರ್ಗ ೨ಎ ಮತ್ತು ಪ್ರವರ್ಗ ೨ಬಿ, ವರ್ಗಗಳಿಗೆ ಸರ್ಕಾರದ ಆದೇಶದ ಸಂಖ್ಯೆ ಸಿ.ಪಿ ೧೧೩, ಎಸ್.ಪಿ.ಐ ೨೦೧೭ ದಿ:೨೮–೧೨–೨೦೧೭ರ ಪ್ರಕಾರ ಶೇ ೨೫% ರಷ್ಟು ರಿಯಾಯಿತಿಯನ್ನು ನೀಡಲಾಗುತ್ತಿದೆಯೇ;



(ಆ) ಹಾಗಿದ್ದಲ್ಲಿ, ಜಿಲ್ಲಾವಾರು, ವರ್ಗಾವಾರು, ರಿಯಾಯಿತಿ ನೀಡಿದ ಮೊತ್ತದ ವಿವರಗಳನ್ನು ನೀಡುವುದು;

(ಇ) ನೀಡದಿದ್ದಲ್ಲಿ, ಬಾಕಿ ಇರುವ ಉದ್ದಿಮೆದಾರರ ಸಂಖ್ಯೆ ಎಷ್ಟು? (ಜಿಲ್ಲಾವಾರು, ವರ್ಗಾವಾರು ಮೊತ್ತದ ವಿವರಗಳನ್ನು ನೀಡುವುದು)

## ಕೆ.ಎಸ್.ಎಸ್.ಐ.ಡಿ.ಸಿ/ಕೆ.ಐ.ಎ.ಡಿ.ಬಿ ಸಂಸ್ಥೆಗಳು ಅಭಿವೃದ್ಧಿಪಡಿಸಿರುವ ಕೈಗಾರಿಕಾ ವಸಹಾತುಗಳ ಕುರಿತು

**ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) :–**

೭೦೬ (೮೫೧) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೆ.ಎಸ್.ಎಸ್.ಐ.ಡಿ.ಸಿ./ಕೆ.ಐ.ಎ.ಡಿ.ಬಿ. ಸಂಸ್ಥೆಗಳು ಅಭಿವೃದ್ಧಿಪಡಿಸಿರುವ ಕೈಗಾರಿಕಾ ವಸಹಾತು/ಪ್ರದೇಶಗಳಲ್ಲಿ ನಿವೇಶನಗಳನ್ನು ಸರ್ಕಾರದ ಆದೇಶ ಸಂಖ್ಯೆ:ಸಿ.ಪಿ.೮೨, ಸಿ.ಎಸ್.ಸಿ.೨೦೧೬, ದಿನಾಂಕ: ೦೫.೦೫.೨೦೧೬ರ ಪ್ರಕಾರ ಹಿಂದುಳಿದ ವರ್ಗ, ವರ್ಗ–೧, ಪ್ರವರ್ಗ ೨ಎ ರವರಿಗೆ ಶೇ. ೧೦%ರ ಮೀಸಲಾತಿ ಪ್ರಕಾರ ಹಂಚಿಕೆ ಮಾಡಲಾಗಿದೆಯೇ ;

(ಆ) ಹಂಚಿಕೆ ಮಾಡಿದ್ದಲ್ಲಿ ಒಟ್ಟು ಉದ್ದಿಮೆದಾರರ ಸಂಖ್ಯೆ ಎಷ್ಟು ; (ಜಿಲ್ಲಾವಾರು, ವರ್ಗವಾರು ವಿವರಗಳನ್ನು ನೀಡುವುದು)

(ಇ) ಹಂಚಿಕೆ ಮಾಡದಿದ್ದಲ್ಲಿ, ಕಾರಣಗಳನ್ನು ನೀಡುವುದು ;

(ಈ) ಈ ಆದೇಶದಲ್ಲಿ ತಿಳಿಸಿರುವಂತೆ ಈ ವರ್ಗದ ಉದ್ದಿಮೆದಾರರಿಗೆ ನಿವೇಶನ/ಶೆಡ್‌ಗಳ ಮೊತ್ತವನ್ನು ೬ ತ್ರೈಮಾಸಿಕ ಕಂತುಗಳಲ್ಲಿ ಪಾವತಿಸಲು ಅವಕಾಶ ಕಲ್ಪಿಸಲಾಗಿದೆಯೇ ;

(ಉ) ಕಲ್ಪಿಸಿದ್ದಲ್ಲಿ, ರಾಜ್ಯದಲ್ಲಿ ಇದರ ಲಾಭ ಪಡೆದ ಉದ್ದಿಮೆದಾರರ ಸಂಖ್ಯೆ ಎಷ್ಟು ?

## ಗಣಿ ಮತ್ತು ಭೂ ವಿಜ್ಞಾನ ಇಲಾಖೆಯಲ್ಲಿನ ವ್ಯವಸ್ಥೆಯ ಕುರಿತು

**ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) :-**

೭೦೭ (೮೫೦) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ೨೦೧೧ನೇ ಸಾಲಿನಿಂದ ಇಲ್ಲಿಯವರೆಗೆ Integrated Lease Management System ಅಡಿಯಲ್ಲಿ ಒಟ್ಟು ಎಷ್ಟು ಈ-ಪರವಾನಿಗೆ (E-permit) ಯನ್ನು ನೀಡಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಈ-ಪರವಾನಿಗೆ (E-permit) ತೆಗೆದುಕೊಳ್ಳದೇ ಅನಧಿಕೃತವಾಗಿ ಗಣಿಗಾರಿಕೆ ನಡೆಸುತ್ತಿರುವ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಪ್ರಕರಣಗಳ ಸಂಖ್ಯೆ ಎಷ್ಟು ; ಹಾಗೂ ಕ್ರಮ ಕೈಗೊಂಡಿರುವ ಪ್ರಕರಣಗಳ ಜಿಲ್ಲಾವಾರು ವಿವರ ನೀಡುವುದು ;

(ಇ) ಈ-ಪರವಾನಿಗೆ (E-permit)) ತೆಗೆದುಕೊಂಡಿರುವ ಅರ್ಜಿದಾರರಲ್ಲಿ ಪರಿಸರ ಮಾಲಿನ್ಯ ಹಾಗೂ ಇತರೆ ಇಲಾಖೆಗಳ ವತಿಯಿಂದ ಅನುಮತಿ ಅಥವಾ Consent for Establishment (CFE) ಹಾಗೂ Consent for Operation (CFO) ತೆಗೆದುಕೊಂಡಿರುವ ಮತ್ತು ತೆಗೆದುಕೊಳ್ಳದೇ ಇರುವವರ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)



(ಈ) ಈ-ಪರವಾನಿಗೆ (E-permit) ತೆಗೆದುಕೊಂಡಿರುವ ಅರ್ಜಿದಾರರ ನಿವೇಶನಗಳಲ್ಲಿ GIS/GPS ವ್ಯವಸ್ಥೆ ಅಳವಡಿಸಿಕೊಳ್ಳಲಾಗಿದೆಯೇ ; ಅಳವಡಿಸಿಕೊಂಡಿದ್ದಲ್ಲಿ ಈ ವ್ಯವಸ್ಥೆಯ ಮೇಲ್ವಿಚಾರಣೆಯನ್ನು ಯಾರು ಮಾಡುತ್ತಿದ್ದಾರೆ ; (ವಿವರ ನೀಡುವುದು)

(ಉ) E-governance ಇಲಾಖೆಯಡಿಯಲ್ಲಿ ನಿಯಂತ್ರಣ ಮಾಡಲಾಗುತ್ತಿದೆಯೇ ; ಇ-ಹರಾಜು (E-action) and ಇ-ಸಾರಿಗೆ (E-Transportation) ವ್ಯವಸ್ಥೆಯಡಿಯಲ್ಲಿ ಎಷ್ಟು ವಹಿವಾಟು ಆಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಊ) Stake Holders Roles and Responsibilities ಪ್ರಕಾರ ವ್ಯವಸ್ಥೆಯು ಕಾರ್ಯಗತವಾಗಿದೆಯೇ ? (ವಿವರ ನೀಡುವುದು)

## ರಾಜ್ಯದಲ್ಲಿ ಪಡಿತರ ವಿತರಣಾ ವ್ಯವಸ್ಥೆಯ ಕುರಿತು

**ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) :-**

೭೦೮ (೮೪೯) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಮಾರ್ಚ್ ೨೦೧೮ರ ವರೆಗೆ ಪಡಿತರ ವಿತರಣಾ ವ್ಯವಸ್ಥೆಯಡಿಯಲ್ಲಿ ಬಡತನ ರೇಖೆಗಿಂತ ಕೆಳಗೆ ಇರುವ ಸಾರ್ವಜನಿಕ ಪ್ರತಿ ವ್ಯಕ್ತಿ/ಕುಟುಂಬಗಳಿಗೆ ಎಷ್ಟು ಪ್ರಮಾಣದ ಆಹಾರ ಧಾನ್ಯಗಳನ್ನು ವಿತರಿಸಲಾಗುತ್ತಿತ್ತು; (ವಿವರ ನೀಡುವುದು)

(ಆ) ಪ್ರಸ್ತುತ ಪಡಿತರ ವಿತರಣಾ ವ್ಯವಸ್ಥೆಯಡಿಯಲ್ಲಿ ಬಡತನ ರೇಖೆಗಿಂತ ಕೆಳಗೆ ಇರುವ ಸಾರ್ವಜನಿಕ ಪ್ರತಿ ವ್ಯಕ್ತಿ/ಕುಟುಂಬಗಳಿಗೆ ಎಷ್ಟು ಪ್ರಮಾಣದ ಆಹಾರ ಧಾನ್ಯಗಳನ್ನು ವಿತರಿಸಲಾಗುತ್ತಿದೆ; (ವಿವರ ನೀಡುವುದು)

(ಇ) ರಾಜ್ಯದಲ್ಲಿ ಪ್ರಸ್ತುತ ಪಡಿತರ ವಿತರಣಾ ವ್ಯವಸ್ಥೆಯಡಿಯಲ್ಲಿ ಬಡತನ ರೇಖೆಗಿಂತ ಕೆಳಗೆ ಇರುವ ವ್ಯಕ್ತಿ/ಕುಟುಂಬಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಈ) ಮುಂದಿನ ದಿನಗಳಲ್ಲಿ ಪಡಿತರ ವಿತರಣಾ ವ್ಯವಸ್ಥೆಯಡಿಯಲ್ಲಿ ಯಾವುದಾದರೂ ಬದಲಾವಣೆ ತರುವ ಬಗ್ಗೆ ಸರ್ಕಾರ ಚಿಂತಿಸಿದೆಯೇ ? (ವಿವರ ನೀಡುವುದು)

## ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ ಕುರಿತು

**ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೦೯ (೭೮೫) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೫ ವರ್ಷಗಳಲ್ಲಿ ಮೈಸೂರು ನಗರ/ಜಿಲ್ಲೆಯಲ್ಲಿ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ (ಎಂ.ಡಿ.ಎ) ವತಿಯಿಂದ ಬಿಡುಗಡೆ ಮಾಡಲಾದ ಬಡಾವಣೆಗಳ ಸಂಖ್ಯೆ ಎಷ್ಟು ; (ಮಾಹಿತಿ ಒದಗಿಸುವುದು)

(ಆ) ಈ ಬಡಾವಣೆಗಳಲ್ಲಿ ಎಂ.ಡಿ.ಎ. ಮಾರ್ಗಸೂಚಿಯಂತೆ ತ್ಯಾಜ್ಯ ನೀರಿನ ಸಂಸ್ಕರಣಾ ಘಟಕ (ಎಸ್.ಟಿ.ಪಿ) ಗಳನ್ನು ನಿರ್ಮಾಣ ಮಾಡಲಾಗಿದೆಯೇ ; ಇಲ್ಲದಿದ್ದಲ್ಲಿ ಅಂತಹ ಬಡಾವಣೆಗಳ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ಮಾಹಿತಿ ಒದಗಿಸುವುದು)



## ಹಣ್ಣು, ಹೂ ತರಕಾರಿ ಬೆಳೆದ ರೈತರಿಗೆ ಪರಿಹಾರ ನೀಡುವ ಕುರಿತು

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೧೦ (೭೯೩) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಲಾಕ್‌ಡೌನ್ ಸಂದರ್ಭದಲ್ಲಿ ಹೂವು, ಹಣ್ಣು ತರಕಾರಿ ಬೆಳೆದ ರೈತರಿಗೆ ಆದ ನಷ್ಟದ ಪ್ರಮಾಣ ಎಷ್ಟು;

(ಆ) ಪಾಲಿಹೌಸ್ ಬೆಳೆಗಾರರಿಗೆ ಲಾಕ್‌ಡೌನ್ ಸಂದರ್ಭದಲ್ಲಿ ಆದ ನಷ್ಟಕ್ಕೆ ಸರ್ಕಾರದಿಂದ ಪರಿಹಾರ ಘೋಷಣೆಯಾಗಿದೆಯೇ; ಹಾಗಿದ್ದಲ್ಲಿ, ಪ್ರತಿ ರೈತರಿಗೆ ನೀಡಿದ ಮೊತ್ತ ಎಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಲಾಕ್‌ಡೌನ್ ಸಂದರ್ಭದಲ್ಲಿ ಬೆಳೆ ನಷ್ಟ ಅನುಭವಿಸಿದ ರೈತರಿಗೆ ಪರಿಹಾರ ನೀಡಲು ಇರುವ ಮಾರ್ಗಸೂಚಿಗಳೇನು;

(ಈ) ಬೆಳೆ ಸಮೀಕ್ಷೆಯಲ್ಲಿ ನಮೂದಾಗದ ಬೆಳೆಗಳಿಗೆ ಪರಿಹಾರ ನೀಡಲು ಅವಕಾಶವಿದೆಯೇ; ಅವಕಾಶವಿದ್ದಲ್ಲಿ, ರೈತರು ಅನುಸರಿಸಬೇಕಾದ ಕ್ರಮಗಳೇನು?

## ತೋಟಗಾರಿಕೆ ಇಲಾಖೆಯಲ್ಲಿ ಅನುಷ್ಠಾನಗೊಳಿಸುತ್ತಿರುವ ಯೋಜನೆಗಳ ಬಗ್ಗೆ

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೧೧ (೭೯೧) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ತೋಟಗಾರಿಕೆ ಅಭಿವೃದ್ಧಿಗಾಗಿ ಅನುಷ್ಠಾನಗೊಳ್ಳುತ್ತಿರುವ ಕೇಂದ್ರ/ರಾಜ್ಯ ಸರ್ಕಾರದ ಯೋಜನೆಗಳು ಎಷ್ಟು; ಸದರಿ ಯೋಜನೆಗಳಲ್ಲಿ ರೈತರಿಗೆ ನೀಡುವ ಎಸ್‌ಸಿಪಿ/ಟಿಎಸ್‌ಪಿ ಶೇಕಡ ಸಹಾಯಧನ ಎಷ್ಟು;

(ಆ) ೨೦೨೦-೨೧ನೇ ಸಾಲಿನಲ್ಲಿ ರೈತರಿಗೆ ಕೇಂದ್ರ ಸರ್ಕಾರದ ಯೋಜನೆಗಳಿಗೆ ರಾಜ್ಯ ಸರ್ಕಾರದಿಂದ ಎಸ್‌ಸಿಪಿ/ಟಿಎಸ್‌ಪಿ ಹೊಂದಾಣಿಕೆ ಮೊತ್ತವನ್ನು ನೀಡಲಾಗುತ್ತಿದೆಯೇ; ನೀಡಲಾಗುತ್ತಿದ್ದಲ್ಲಿ, ಎಷ್ಟು ಮೊತ್ತ ನೀಡಲಾಗಿದೆ;

(ಇ) ೨೦೧೯-೨೦ನೇ ಸಾಲಿನಲ್ಲಿ ತೋಟಗಾರಿಕೆ ಇಲಾಖೆಯಲ್ಲಿ ಅನುಷ್ಠಾನಗೊಳಿಸಿರುವ ಎಲ್ಲಾ ಯೋಜನೆಗಳನ್ನು ಪ್ರಸಕ್ತ ಸಾಲಿನಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆಯೇ;

(ಈ) ಪ್ರಸಕ್ತ ಸಾಲಿನಲ್ಲಿ ೩೦ ಹೆಚ್‌ಪಿ ಟ್ರ್ಯಾಕ್ಟರ್‌ಗಳಿಗೆ ಸಹಾಯಧನ ನೀಡಲಾಗುತ್ತಿದೆಯೇ; ನೀಡಲಾಗುತ್ತಿದ್ದಲ್ಲಿ, ಸಹಾಯಧನದ ಮೊತ್ತ ಎಷ್ಟು; ಇಲ್ಲವಾದಲ್ಲಿ, ಯಾವ ಕಾರಣಕ್ಕೆ ನೀಡಲಾಗುತ್ತಿಲ್ಲ?

## ಮರಳು ಕೇಂದ್ರಗಳ ಕುರಿತು

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೭೧೨ (೮೯೯) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಎಷ್ಟು ಮರಳು ಕೇಂದ್ರಗಳನ್ನು ತೆರೆಯಲಾಗಿದೆ ;

(ಆ) ೨೦೧೯-೨೦೨೦ನೇ ಸಾಲಿನಲ್ಲಿ ರಾಜ್ಯದಲ್ಲಿ ಎಷ್ಟು ಪ್ರಮಾಣದ ಮರಳು ಸಾಗಾಣಿಕೆ ಮಾಡಲಾಗಿದೆ ;



(ಇ) ಈ ಮರಳು ಕೇಂದ್ರಗಳಿಂದ ಆಯಾ ಜಿಲ್ಲೆಗಳ ಸರ್ಕಾರಿ ಕಾಮಗಾರಿಗಳಿಗೆ ಎಷ್ಟು ಮರಳನ್ನು ಬಳಸಲಾಗಿದೆ ;

(ಈ) ೨೦೧೯-೨೦೨೦ನೇ ಸಾಲಿನಲ್ಲಿ ಎಷ್ಟು ರಾಜಧನ ಸಂಗ್ರಹಿಸಲಾಗಿದೆ ? (ವಿವರಗಳನ್ನು ಒದಗಿಸುವುದು)

## ಅಕ್ರಮವಾಗಿ ಪಡಿತರ ಚೀಟಿಗಳು ವಿತರಣೆಯಾಗುತ್ತಿರುವ ಕುರಿತು

**ಶ್ರೀ ಶಶೀಲ್ ಜಿ.ನಮೋಶಿ (ಶಿಕ್ಷಕರ ಕ್ಷೇತ್ರ) :-**

೭೧೩ (೮೫೮) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಕಳೆದ ೩ ವರ್ಷಗಳಲ್ಲಿ ಸರ್ಕಾರ ಎಷ್ಟು ಪಡಿತರ ಚೀಟಿಗಳನ್ನು ವಿತರಿಸಿದೆ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಬಿ.ಪಿ.ಎಲ್ ಕಾರ್ಡ್ ಪಡೆಯಲು ಇರುವ ಮಾನದಂಡಗಳೇನು;

(ಇ) ರಾಜ್ಯದಲ್ಲಿ ಒಟ್ಟು ಎಷ್ಟು ಅಕ್ರಮ ಪಡಿತರ ಚೀಟಿಗಳನ್ನು ಸರ್ಕಾರ ವಶಪಡಿಸಿಕೊಂಡಿದೆ;

(ಈ) ಬಯೋಮೆಟ್ರಿಕ್ ವ್ಯವಸ್ಥೆಯಿಂದ ಬಿ.ಪಿ.ಎಲ್ ಕಾರ್ಡುದಾರರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ಹೊಸದಾದ ಪಡಿತರ ಅಂಗಡಿಗಳನ್ನು ತೆರೆಯಲು ಸರ್ಕಾರ ಅನುಸರಿಸುತ್ತಿರುವ ಮಾನದಂಡಗಳೇನು;

(ಊ) ಪಡಿತರ ಅಂಗಡಿಗಳನ್ನು ನಡೆಸುತ್ತಿರುವವರಿಗೆ ನೀಡುತ್ತಿರುವ ಸೌಲಭ್ಯಗಳೇನು;

(ಉ) ಹೊಸದಾಗಿ ಎಷ್ಟು ಪಡಿತರ ಅಂಗಡಿಗಳನ್ನು ತೆರೆಯುವ ಯೋಚನೆ ಸರ್ಕಾರದ ಮುಂದಿದೆಯೇ? (ಮಾಹಿತಿ ನೀಡುವುದು)

## ಮಂಡ್ಯ D.C.C ಬ್ಯಾಂಕಿನಲ್ಲಿ ಅವ್ಯವಹಾರದ ತನಿಖೆ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೭೧೪ (೭೮೧) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ D.C.C ಬ್ಯಾಂಕಿನಲ್ಲಿ ಕೋರ್ ಬ್ಯಾಂಕಿಂಗ್ ಸಲ್ಯೂಷನ್ ಅಳವಡಿಸಲು ಕಾನೂನು ಬಾಹಿರವಾಗಿ ಗುತ್ತಿಗೆ ನೀಡಿರುವುದು ಮತ್ತು ಇನ್ನಿತರ ಅವ್ಯವಹಾರ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ತನಿಖಾ ತಂಡವು ಸರ್ಕಾರಕ್ಕೆ ವರದಿ ಸಲ್ಲಿಸಿದೆಯೇ; (ವಿವರ ನೀಡುವುದು)

(ಇ) ಸಲ್ಲಿಸಿದ್ದಲ್ಲಿ, ರುಜುವಾತಾದ ಆರೋಪಗಳ ಸಂಖ್ಯೆ ಎಷ್ಟು;

(ಈ) ತಪ್ಪಿತಸ್ಥರ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ಖಾಲಿ ಹುದ್ದೆಗಳ ಭರ್ತಿ ಭಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೭೧೫ (೭೮೨) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತೋಟಗಾರಿಕೆ ಮತ್ತು ರೇಷ್ಮೆ ಇಲಾಖೆಯಲ್ಲಿ ಮಂಜೂರಾದ ಒಟ್ಟು ಹುದ್ದೆಗಳ ಸಂಖ್ಯೆ ಎಷ್ಟು;



(ಆ) ಇದರಲ್ಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; ಎಂದಿನಿಂದ ಖಾಲಿ ಇವೆ;

(ಇ) ಈ ಖಾಲಿ ಹುದ್ದೆಗಳನ್ನು ಭರ್ತಿ ಮಾಡುವುದು ಯಾವಾಗ; (ವಿವರ ನೀಡುವುದು)

## ಮಡಿಕೇರಿ ನಗರಸಭೆಯಲ್ಲಿ ಉತ್ಪತ್ತಿಯಾಗುವ ಕಸದ ವಿಲೇವಾರಿ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೧೬ (೭೬೭) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಡಿಕೇರಿ ನಗರದಲ್ಲಿ ಉತ್ಪತ್ತಿಯಾಗುವ ಕಸವನ್ನು ನಗರಸಭೆಯವರು ಯಾವ ರೀತಿಯಲ್ಲಿ ವಿಲೇವಾರಿ ಮಾಡುತ್ತಿರುತ್ತಾರೆ; (ಪೂರ್ಣ ಮಾಹಿತಿ ನೀಡುವುದು)

(ಆ) ಹಸಿ ಮತ್ತು ಒಣ ಕಸವನ್ನು ಯಾವ ರೀತಿಯಲ್ಲಿ ಬೇರ್ಪಡಿಸಲಾಗುತ್ತಿದೆ; ಬೇರ್ಪಡಿಸಿದ ಒಣ ಕಸವನ್ನು ಏನು ಮಾಡಲಾಗುತ್ತಿದೆ; (ವಿವರ ನೀಡುವುದು)

(ಇ) ಕಸ ವಿಲೇವಾರಿಗಾಗಿ ಹೊಸ ಜಾಗವನ್ನು ನಿಗದಿ ಮಾಡಲಾಗಿದೆಯೇ; ಹಾಗಿದ್ದಲ್ಲಿ, ಅದರ ವಿವರಗಳನ್ನು ನೀಡುವುದು?

## ಕಲಬುರಗಿ ನಗರಾಭಿವೃದ್ಧಿ ಪ್ರಾಧಿಕಾರದ ಕುರಿತು

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನ ಸಭೆಯಿಂದ ಚುನಾಯಿತರಾದವರು):–**

೭೧೭ (೮೨೪) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ನಗರಾಭಿವೃದ್ಧಿ ಪ್ರಾಧಿಕಾರವು ಸ್ಥಾಪನೆಯಾದದ್ದು ಯಾವಾಗ; ಸದರಿ ಪ್ರಾಧಿಕಾರದಿಂದ ನಿರ್ಮಾಣವಾದ ಲೇಔಟ್‌ಗಳು ಯಾವುವು; ಇವುಗಳ ವೆಚ್ಚ ಎಷ್ಟು;

(ಆ) ಕಲಬುರಗಿ ನಗರಾಭಿವೃದ್ಧಿ ಪ್ರಾಧಿಕಾರದಿಂದ ಹಂಚಿಕೆ ಮಾಡಲಾದ ನಿವೇಶನಗಳೆಷ್ಟು ; ಮತ್ತು ಸಿ.ಎ. ನಿವೇಶನಗಳ ಸಂಖ್ಯೆ ಎಷ್ಟು; (ಅಳತೆವಾರು ಮಾಹಿತಿ ನೀಡುವುದು)

(ಇ) ಕಲಬುರಗಿ ನಗರಾಭಿವೃದ್ಧಿ ಪ್ರಾಧಿಕಾರದ ಆದಾಯವೆಷ್ಟು; (ಪ್ರಾರಂಭದಿಂದ ಮಾಹಿತಿ ನೀಡುವುದು)

(ಈ) ಖಾಸಗಿಯವರಿಂದ ನಿರ್ಮಾಣವಾದ ಲೇಔಟ್‌ಗಳು ಯಾವುವು; ಹಾಗೂ ಅವುಗಳಿಂದ ನಿರ್ಮಾಣವಾದ ನಿವೇಶನಗಳೆಷ್ಟು; (ಅಳತೆವಾರು ಮಾಹಿತಿ ನೀಡುವುದು)

(ಉ) ಕಲಬುರಗಿ ನಗರಾಭಿವೃದ್ಧಿ ಪ್ರಾಧಿಕಾರಕ್ಕೆ ಸರ್ಕಾರದಿಂದ ಮಂಜೂರಾದ ಸಿಬ್ಬಂದಿ ಎಷ್ಟು; ಕಾರ್ಯನಿರತ ಮತ್ತು ಖಾಲಿಯಿರುವ ಹುದ್ದೆಗಳೆಷ್ಟು ; (ವಿವರ ಒದಗಿಸುವುದು)

(ಊ) ಪ್ರಾಧಿಕಾರದಿಂದ ಭೂ ಸ್ವಾಧೀನವಾದ ಜಮೀನೆಷ್ಟು ಮತ್ತು ಭೂ ಸ್ವಾಧೀನಕ್ಕೆ ಪಾವತಿಯಾದ ಮೊತ್ತ ಎಷ್ಟು? (ಸಂಪೂರ್ಣ ವಿವರ ಒದಗಿಸುವುದು)

## ಗಣಿ ಮತ್ತು ಭೂ ವಿಜ್ಞಾನ ಇಲಾಖೆ

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನ ಸಭೆಯಿಂದ ಚುನಾಯಿತರಾದವರು):–**

೭೧೮ (೭೫೯) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–



(ಅ) ಕಳೆದ ೦೨ ವರ್ಷಗಳಿಂದ ಕಲಬುರಗಿ ಜಿಲ್ಲೆಯಲ್ಲಿ ಅಕ್ರಮ ಗಣಿಗಾರಿಕೆ ಮತ್ತು ಅನಧಿಕೃತ ಮರಳು ಧಂದೆ ನಡೆಸುತ್ತಿದ್ದವರ ವಿರುದ್ಧ ದಾಖಲಾದ ಪ್ರಕರಣಗಳೆಷ್ಟು;

(ಆ) ದಾಖಲಿಸಿದ್ದಲ್ಲಿ, ಈ ಪ್ರಕರಣದಲ್ಲಿ ಎಷ್ಟು ಜನರನ್ನು ಬಂಧಿಸಲಾಗಿದೆ; ಇವರ ವಿರುದ್ಧ ಯಾವ ಕಲಂ ಅಡಿ ಕೇಸ್‌ಗಳನ್ನು ದಾಖಲಿಸಲಾಗಿದೆ;

(ಇ) ಕಲಬುರಗಿ ಜಿಲ್ಲೆಯಲ್ಲಿ ಕಳೆದ ೦೨ ವರ್ಷದಿಂದ ಅಕ್ರಮ ಗಣಿಗಾರಿಕೆ ಮಾಡುತ್ತಿರುವವರಿಂದ ವಸೂಲಾದ ದಂಡದ ಮೊತ್ತ ಎಷ್ಟು? (ತಾಲ್ಲೂಕುವಾರು ಮಾಹಿತಿ ನೀಡುವುದು)

## ಕುಂಬಾರ ಸಂಘದ ಆಡಳಿತ ಮಂಡಳಿಯ ಕುರಿತು.

**ಡಾ॥ ತೇಜಸ್ವಿನಿಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೧೯ (೮೩೨) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಾಸಿಪಾಳ್ಯಂನಲ್ಲಿರುವ ಕುಂಬಾರ ಸಂಘ ಪ್ರಾರಂಭಗೊಂಡಿದ್ದು ಯಾವಾಗ ಹಾಗೂ ಇದರ ಸ್ಥಾಪಕರು ಯಾರು;

(ಆ) ಸಂಘದ ನಿವೇಶನವನ್ನು ಯಾರಿಗೆ ಯಾವಾಗ ಮಂಜೂರು ಮಾಡಲಾಗಿತ್ತು;

(ಇ) ಸಂಘದ ಆದಾಯ ವೆಚ್ಚಗಳ ಬಗ್ಗೆ ಪ್ರತಿ ವರ್ಷ ಆಡಿಟ್ ಮಾಡಿಸಲಾಗಿದೆಯೇ; ಮಾಡಿಸಿದ್ದಲ್ಲಿ, ಕಳೆದ ೫ ವರ್ಷಗಳ ವಾರ್ಷಿಕ ವರದಿಯ ವಿವರಗಳನ್ನು ಒದಗಿಸುವುದು;

(ಈ) ಸದರಿ ಸಂಘದ ಆಡಳಿತ ಮಂಡಳಿಯ ಚುನಾವಣೆಗಳನ್ನು ಕಾಲ ಕಾಲಕ್ಕೆ ನಿಯಮಿತವಾಗಿ ನಡೆಸಲಾಗಿದೆಯೇ; ಹಾಗಿದ್ದಲ್ಲಿ, ಪ್ರಸ್ತುತ

ಅಸ್ತಿತ್ವದಲ್ಲಿರುವ ಆಡಳಿತ ಮಂಡಳಿಗೆ ಚುನಾವಣೆ ನಡೆದಿದ್ದು ಯಾವಾಗ; ಸದರಿ ಚುನಾಯಿತ ಮಂಡಳಿಯ ಅಧ್ಯಕ್ಷರು ಮತ್ತು ಪದಾಧಿಕಾರಿಗಳ ವಿವರ ನೀಡುವುದು;

(ಉ) ಸದರಿ ಹಾಸ್ಟೆಲ್‌ನಲ್ಲಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; ಸದರಿ ವಿದ್ಯಾರ್ಥಿಗಳಿಂದ ಹಾಸ್ಟೆಲ್ ಫೀಯನ್ನು ವಸೂಲಿ ಮಾಡಲಾಗುತ್ತಿದೆಯೇ; ಹಾಗಿದ್ದಲ್ಲಿ ಹಾಸ್ಟೆಲ್ ಫೀ ಎಷ್ಟು; (ಸಂಗ್ರಹಿಸಲಾದ ಹಾಗೂ ಖರ್ಚಾದ ಹಣದ ವರ್ಷಾವಾರು ಮಾಹಿತಿಯನ್ನು ಒದಗಿಸುವುದು)

(ಊ) ಸರ್ಕಾರದಿಂದ ಯಾವ ಯಾವ ಬಾಬ್ತುಗಳಿಗೆ ಅನುದಾನ ಪಡೆಯಲಾಗುತ್ತಿದೆ ಹಾಗೂ ಅದು ಕ್ರಮವಾಗಿ ಸದ್ಬಳಕೆ ಆಗುತ್ತಿದೆಯೇ;

(ಋ) ಸದರಿ ಸಂಘದ ನೋಂದಣಿಯನ್ನು ಪ್ರತಿ ವರ್ಷ ನವೀಕರಿಸಲಾಗುತ್ತಿದೆಯೇ; ಪ್ರಸಕ್ತ ಸಾಲಿಗೆ ನವೀಕರಿಸಿದ ಸಂಖ್ಯೆ ಮತ್ತು ದಿನಾಂಕವನ್ನು ಒದಗಿಸುವುದು ?

## ಸೃಜಿಸಿ, ಸಂಸ್ಕರಿಸಿದ ಘನತ್ಯಾಜ್ಯ ಕೊಳಚೆ ನೀರು ಮತ್ತು ಕಸಗಳ ಪ್ರಮಾಣ

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :–**

೭೨೦ (೮೬೧) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಪಟ್ಟಣ ಮತ್ತು ನಗರ ಪ್ರದೇಶಗಳಲ್ಲಿ ಕಳೆದ ಮೂರು ವರ್ಷಗಳಲ್ಲಿ ಪ್ರತಿ ವರ್ಷ ಸೃಜಿಸಿ, ಸಂಸ್ಕರಿಸಿದ ಘನತ್ಯಾಜ್ಯ ಕೊಳಚೆ ನೀರು ಮತ್ತು ಕಸಗಳ ಪ್ರಮಾಣವೆಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)



(ಆ) ಘನತ್ಯಾಜ್ಯ, ಕೊಳಚೆ ನೀರು ಮತ್ತು ಕಸಗಳನ್ನು ವೈಜ್ಞಾನಿಕವಾಗಿ ಮತ್ತು ಪರಿಸರಕ್ಕೆ ಧಕ್ಕೆ ಆಗದಂತೆ ಸಂಸ್ಕರಿಸಿ ತುಂಬಿಸಲು ಪಟ್ಟಣ ಮತ್ತು ನಗರ ಪ್ರದೇಶಗಳಲ್ಲಿ ಇರುವ ಜಮೀನು/ಜಾಗಗಳೆಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಇ) ಈ ತ್ಯಾಜ್ಯಗಳನ್ನು ವ್ಯವಸ್ಥಿತ ರೀತಿಯಲ್ಲಿ ಸಂಗ್ರಹಿಸಿ ಸಾಗಿಸಿ, ಸಂಸ್ಕರಿಸಿ ಹಾಗೂ ನಿವೇಶನಗಳಲ್ಲಿ ತುಂಬಲು ಅಳವಡಿಸಿರುವ ಯೋಜನೆ/ಕಾರ್ಯಕ್ರಮಗಳೇನು; (ವಿವರ ನೀಡುವುದು)

(ಈ) ಸ್ವಚ್ಛ ಭಾರತ್ ಯೋಜನೆ ಅಡಿ ಘನ ತ್ಯಾಜ್ಯ ಸಂಸ್ಕರಿಸಲು ಕೇಂದ್ರ ಸರ್ಕಾರದಿಂದ ಆರ್ಥಿಕ ಹಾಗೂ ತಾಂತ್ರಿಕ ನೆರವನ್ನು ಅಮೃತ್ ಯೋಜನೆ ಮತ್ತು ಏಳು ಮೆಗಾಸಿಟಿಗಳ ಸುತ್ತಲಿನ ಉಪಗ್ರಹ ಪಟ್ಟಣಗಳಲ್ಲಿ ಹಾಗೂ ಕಳೆದ ೩ ವರ್ಷಗಳಲ್ಲಿ ಕೊಳಚೆ ನೀರು ಸಂಸ್ಕರಣೆ ಮತ್ತು ಚರಂಡಿ ವ್ಯವಸ್ಥೆಯನ್ನು ಅಭಿವೃದ್ಧಿಪಡಿಸಲು ಸಲ್ಲಿಸಿರುವ ಪ್ರಸ್ತಾವನೆಗಳ ವಿವರ ಮತ್ತು ಕೇಂದ್ರ ಸರ್ಕಾರದಿಂದ ಪಡೆದಿರುವ ಅನುದಾನವೆಷ್ಟು? (ಈ ಅನುದಾನವನ್ನು ವ್ಯಯಿಸಿರುವ ವಿವರವನ್ನು ಯೋಜನೆವಾರು ಮತ್ತು ಜಿಲ್ಲಾವಾರು ಒದಗಿಸುವುದು)

## ತುಮಕೂರು ಜಿಲ್ಲೆಯ ವಸಂತ ನರಸಾಪುರ ಕೈಗಾರಿಕಾ ವಲಯದ ಸಮಗ್ರ ಅಭಿವೃದ್ಧಿ ಬಗ್ಗೆ

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :–**

೭೨೧ (೮೬೨) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತುಮಕೂರು ಜಿಲ್ಲೆಯ ವಸಂತ ನರಸಾಪುರದಲ್ಲಿ ರಾಷ್ಟ್ರೀಯ ಬಂಡವಾಳ ಹೂಡಿಕೆ ಮತ್ತು ಉತ್ಪನ್ನ ವಲಯ (National

Investment and Manufacturing Zone-NIMZ) ಸ್ಥಾಪಿಸಲು ೧೩.೦೦೦ ಎಕರೆ ಪ್ರದೇಶವನ್ನು ಭೂಸ್ವಾಧೀನ ಮಾಡಿಕೊಂಡಿರುವುದು ನಿಜವೇ; ಹಾಗಿದ್ದಲ್ಲಿ, ಸಂಪೂರ್ಣ ಮಾಹಿತಿ ನೀಡುವುದು;

(ಆ) ಈ ಕೈಗಾರಿಕಾ ವಲಯವನ್ನು ಅಭಿವೃದ್ಧಿಪಡಿಸಲು ಉದ್ದೇಶಿಸಿ, ಸ್ಥಾಪಿಸಿರುವ ವಿಶೇಷ ಉದ್ದೇಶವುಳ್ಳ ನಿಗಮಕ್ಕೆ (Special purpose Vehicle) ಕೇಂದ್ರ ಸರ್ಕಾರ ನೀಡಿರುವ ಇಕ್ವಿಟಿ ಫಂಡ್ (Equity Fund) ಎಷ್ಟು; (ಸಂಪೂರ್ಣ ವಿವರ ನೀಡುವುದು)

(ಇ) ಈ ವಿಶೇಷ ಉದ್ದೇಶವುಳ್ಳ ನಿಗಮ ಸ್ಥಾಪನೆಯಾಗಿದ್ದಲ್ಲಿ, ಇದರ ಕಾರ್ಯವ್ಯಾಪ್ತಿ ಮತ್ತು ಪ್ರಸ್ತುತದಲ್ಲಿ ನಿರ್ವಹಿಸುತ್ತಿರುವ ಕಾರ್ಯದ ವಿವರ ನೀಡುವುದು;

(ಈ) ವಸಂತನರಸಾಪುರ ಕೈಗಾರಿಕಾ ವಲಯದ ಅಭಿವೃದ್ಧಿ ಬೆಳವಣಿಗೆ ಚೆನ್ನೈ–ಬೆಂಗಳೂರು ಕೈಗಾರಿಕಾ ಕಾರಿಡಾರ್ (CBIC) ತುರ್ತು ನಿರ್ಮಾಣದ ಮೇಲೆ ಅವಲಂಬಿತವಾಗಿರುವುದು ನಿಜವೇ; ಮತ್ತು ಈ ಕಾರಿಡಾರ್ ನಿರ್ಮಾಣ ನೆನೆಗುದಿಗೆ ಬಿದ್ದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಸಮಸ್ಯೆಯನ್ನು ಬಗೆಹರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ವಿವರ ನೀಡುವುದು)

## ರಾಜ್ಯ ಸರ್ಕಾರ ಸಾರ್ವಜನಿಕ ಉದ್ಯಮಗಳಲ್ಲಿ ಹೂಡಿರುವ ಬಂಡವಾಳ ಹಾಗೂ ಡಿವಿಡೆಂಟ್ ವಿತರಣೆ

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :–**

೭೨೨ (೮೬೦) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–



(ಅ) ರಾಜ್ಯದಲ್ಲಿರುವ ಒಟ್ಟು ಸಾರ್ವಜನಿಕ ಉದ್ಯಮಗಳೆಷ್ಟು ; (ವಿವರ ನೀಡುವುದು)

(ಆ) ಈ ಉದ್ಯಮಗಳಲ್ಲಿ ರಾಜ್ಯ ಸರ್ಕಾರ ಹೂಡಿರುವ ಬಂಡವಾಳವೆಷ್ಟು; (ವಿವರ ನೀಡುವುದು)

(ಇ) ಕಳೆದ ೩ ವರ್ಷಗಳಲ್ಲಿ ಎಷ್ಟು ಉದ್ಯಮಗಳು ಸರ್ಕಾರದ ಹೂಡಿಕೆಯನ್ನು ಹಿಂದಿರುಗಿಸಿವೆ ಮತ್ತು ಹೂಡಿಕೆಯ ಮೇಲೆ ಡಿವಿಡೆಂಡ್ ನೀಡಿವೆ ; (ವಿವರ ನೀಡುವುದು)

(ಈ) ಮೇಲಿನ ಉದ್ಯಮಗಳು ಕಂಪನಿ ಸಾಮಾಜಿಕ ಜವಾಬ್ದಾರಿ (Company Social Responsibility) ಅಡಿಯಲ್ಲಿ ವಿವಿಧೋದ್ದೇಶಗಳಿಗೆ ಹಂಚಿಕೆ ಮಾಡಿರುವ ದ್ರವ್ಯದ ಪ್ರಮಾಣವೆಷ್ಟು? (ವಿವರ ನೀಡುವುದು)

## ಗಣಿಗಾರಿಕೆಯಿಂದ ಬಾಧಿತ ವಲಯಗಳಿಗೆ ಸಮಗ್ರ ಪರಿಸರ ಯೋಜನೆ

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :–**

೭೨೩ (೮೫೯) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸುಪ್ರೀಂಕೋರ್ಟ್ ಆದೇಶದಂತೆ, ಗಣಿಗಾರಿಕೆಯಿಂದ ಬಾಧಿತ ವಲಯಗಳಿಗೆ ಸಮಗ್ರ ಪರಿಸರ ಯೋಜನೆ (Comprehensive Environmental Plan for Mining Impact Zone-CEPMIZ) ಅಡಿಯಲ್ಲಿ ರಾಜ್ಯ ಸರ್ಕಾರ ಪರಿಸರ ಸಮತೋಲನಕ್ಕೆ ಸುಪ್ರೀಂಕೋರ್ಟಿಗೆ ಸಲ್ಲಿಸಿರುವ ಕಾರ್ಯ ಯೋಜನೆ (Action Plan) ಯಾವುದು ; (ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಈ ಕಾರ್ಯ ಯೋಜನೆಗೆ ಸುಪ್ರೀಂಕೋರ್ಟ್ ಅನುಮೋದನೆ ನೀಡಿದೆಯೇ ; ಹಾಗಿದ್ದಲ್ಲಿ, ಸಂಪೂರ್ಣ ವಿವರ ನೀಡುವುದು ;

(ಇ) ಒಂದು ವೇಳೆ ಸುಪ್ರೀಂಕೋರ್ಟ್ ಈ ಕಾರ್ಯ ಯೋಜನೆಗೆ ಇದುವರೆಗೂ ಅನುಮತಿ ನೀಡದಿದ್ದಲ್ಲಿ, ರಾಜ್ಯ ಸರ್ಕಾರ ಅನುಮತಿ ಪಡೆಯಲು ಕೈಗೊಂಡಿರುವ ಕ್ರಮಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)

## ಸರ್ಕಾರಿ ಕಾರ್ಖಾನೆಗಳ ಕುರಿತು

**ಶ್ರೀ ಆರ್.ಬಿ. ತಿಮ್ಮಾಪೂರ (ವಿಧಾನಸಭೆಯಿಂದ ಚುನಾಯಿತರಾದವರು):–**

೭೪ (೭೮೮) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ ಕಾರ್ಖಾನೆಗಳ ಸಂಖ್ಯೆ ಎಷ್ಟು ; ಈ ಪೈಕಿ ಎಷ್ಟು ಕಾರ್ಖಾನೆಗಳನ್ನು ಗುತ್ತಿಗೆಗೆ ನೀಡಲಾಗಿದೆ ;

(ಆ) ಗುತ್ತಿಗೆ ನೀಡಲು ಅನುಸರಿಸುತ್ತಿರುವ ಮಾನದಂಡಗಳೇನು ?

## ಕೊಡಗು ಜಿಲ್ಲೆಯಲ್ಲಿನ ನಗರ ಸ್ಥಳೀಯ ಸಭೆಗಳಲ್ಲಿ ಇರುವ ನಿವೇಶನ ರಹಿತರು ಹಾಗೂ ವಸತಿ ರಹಿತರ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೭೫ (೭೨೧) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಡಗು ಜಿಲ್ಲೆಯಲ್ಲಿನ ನಗರ ಸ್ಥಳೀಯ ಸಂಸ್ಥೆಗಳಲ್ಲಿ (ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿ)ಗಳಲ್ಲಿ ಪ್ರಸ್ತುತ ಇರುವ ನಿವೇಶನ ರಹಿತರು ಹಾಗೂ ವಸತಿ ರಹಿತರ ಪಟ್ಟಿ ತಯಾರಿಸಲಾಗಿದೆಯೇ;



(ಆ) ಪಟ್ಟಿ ಆಗಿದ್ದಲ್ಲಿ, ಈ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಪ್ರಸ್ತುತ ಇರುವ ನಿವೇಶನ ರಹಿತರು ಹಾಗೂ ವಸತಿ ರಹಿತರ ಸಂಖ್ಯೆ ಎಷ್ಟು ;

(ಇ) ಸದರಿ ನಿವೇಶನ ರಹಿತರು ಹಾಗೂ ವಸತಿ ರಹಿತರಿಗೆ ನಿವೇಶನ ಮತ್ತು ವಸತಿ ಒದಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಈ) ಯಾವ ಕಾಲಮಿತಿಯೊಳಗೆ ಈ ಎಲ್ಲಾ ನಿವೇಶನ ರಹಿತರು ಹಾಗೂ ವಸತಿ ರಹಿತರಿಗೆ ನಿವೇಶನ ಮತ್ತು ವಸತಿ ಒದಗಿಸಲಾಗುವುದು ?

## ಬೀದರ್ ಪಟ್ಟಣದಲ್ಲಿ ಒಳಚರಂಡಿ ಯೋಜನೆ ಕುರಿತು

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೬ (೮೦೭) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಪಟ್ಟಣದಲ್ಲಿ ಒಳಚರಂಡಿ ಯೋಜನೆ ಕಾಮಗಾರಿಯನ್ನು ಎಷ್ಟು ಅಂದಾಜು ವೆಚ್ಚದಲ್ಲಿ ಪ್ರಾರಂಭಿಸಲಾಗಿದೆ ; ಯಾವಾಗ ಪ್ರಾರಂಭಿಸಲಾಗಿದೆ ;

(ಆ) ಪ್ರಸ್ತುತ ಕಾಮಗಾರಿಯು ಯಾವ ಹಂತದಲ್ಲಿದೆ ಹಾಗೂ ಅದನ್ನು ಪೂರ್ಣಗೊಳಿಸಲು ನಿಗಧಿಪಡಿಸಿರುವ ಕಾಲಮಿತಿಯೇನು ;

(ಇ) ಪ್ರಸ್ತುತ ಯಾವ ಬಡಾವಣೆಗಳಲ್ಲಿ ಎಷ್ಟು ಮನೆಗಳಿಗೆ ಸಂಪರ್ಕವನ್ನು ನೀಡಲಾಗಿದೆ ಹಾಗೂ ಬಾಕಿಯಿರುವ ಮನೆಗಳಿಗೆ ಯಾವಾಗ ಸಂಪರ್ಕವನ್ನು ನೀಡಲಾಗುವುದು ? (ವಿವರಗಳೊಂದಿಗೆ ಮಾಹಿತಿ ನೀಡುವುದು)

## ಬೀದರ್ ಜಿಲ್ಲೆಯಲ್ಲಿ ಬಿಪಿಎಲ್ & ಎಪಿಎಲ್ ಕಾರ್ಡ್ ವಿತರಿಸುವ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೭೨೭ (೮೧೯) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೀದರ್ ಜಿಲ್ಲೆಯಲ್ಲಿ ಈವರೆಗೆ ವಿತರಿಸಲಾದ ಬಿ.ಪಿ.ಎಲ್, ಎ.ಪಿ.ಎಲ್ ಕಾರ್ಡ್‌ಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ೨೦೧೯-೨೦ನೇ ಸಾಲಿನಲ್ಲಿ ಪತ್ತೆ ಹಚ್ಚಲಾದ ನಕಲಿ ಪಡಿತರ ಚೀಟಿಗಳ ಸಂಖ್ಯೆ ಎಷ್ಟು ; ಎಷ್ಟು ಜನರ ವಿರುದ್ಧ ಕ್ರಮ ಕೈಗೊಳ್ಳಲಾಗಿದೆ ? (ವಿವರ ಒದಗಿಸುವುದು)

## ಲಾಕ್‌ಡೌನ್ ಸಮಯದಲ್ಲಿ ರೈತರಿಗೆ ಪರಿಹಾರ ನೀಡಲಾಗಿರುವ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೭೨೮ (೮೦೬) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಲಾಕ್‌ಡೌನ್ ಸಮಯದಲ್ಲಿ ಹೂ, ತರಕಾರಿ ಬೆಳೆದು ನಷ್ಟಕ್ಕೊಳಗಾದ ರೈತರಿಂದ ಪರಿಹಾರಕ್ಕಾಗಿ ಬಂದ ಅರ್ಜಿಗಳ ಸಂಖ್ಯೆ ಎಷ್ಟು ; ಈ ಪೈಕಿ ಎಷ್ಟು ಜನರಿಗೆ ಪರಿಹಾರ ನೀಡಲಾಗಿದೆ ; ಇನ್ನೂ ಎಷ್ಟು ಜನರಿಗೆ ಪರಿಹಾರ ನೀಡಬೇಕಿದೆ ; ತಾಲ್ಲೂಕುವಾರು ಮಾಹಿತಿ ನೀಡುವುದು ; ಪರಿಹಾರ ನೀಡುವಲ್ಲಿ ವಿಳಂಬವಾಗಲು ಕಾರಣವೇನು ;



(ಆ) ಬೀದರ್ ಜಿಲ್ಲೆಯಲ್ಲಿ ಎಷ್ಟು ಹೆಕ್ಟೇರ್ ಪ್ರದೇಶ ಹನಿ ನೀರಾವರಿ ಇದೆ ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಹನಿ ನೀರಾವರಿಗಾಗಿ ಅರ್ಜಿ ಸಲ್ಲಿಸಿದ್ದರೂ ವಿಳಂಬವಾಗುತ್ತಿದ್ದು ಸರ್ಕಾರವು ವಿಳಂಬ ನಿವಾರಣೆ ಮಾಡಲು ಕ್ರಮವಹಿಸುವುದೇ?

## ರಾಜ್ಯದಲ್ಲಿ 'ಸ್ಮಾರ್ಟ್‌ಸಿಟಿ' ಯೋಜನೆ ಜಾರಿಗೊಳಿಸುವ ಕುರಿತು

**ಶ್ರೀ ಲಹರ್ ಸಿಂಗ್ ಸಿರೋಯಾ (ವಿಧಾನಸಭೆಯಿಂದ ಚುನಾಯಿತರಾದವರು):-**

೭೨೯ (೭೮೯) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಸ್ಮಾರ್ಟ್‌ಸಿಟಿ ಯೋಜನೆ ಜಾರಿಯಲ್ಲಿದೆಯೇ ;

(ಆ) ಹಾಗಿದ್ದಲ್ಲಿ, ಈವರೆಗೆ ಸ್ಮಾರ್ಟ್‌ಸಿಟಿ ಯೋಜನೆಗೆ ಕೇಂದ್ರ ಸರ್ಕಾರದಿಂದ ನೀಡಲಾಗಿರುವ ಅನುದಾನ ಹಾಗೂ ಈ ಯೋಜನೆಯಲ್ಲಿ ಆಗಿರುವ ಅಭಿವೃದ್ಧಿ ಕಾರ್ಯಗಳು ಯಾವುವು? (ವಿವರಗಳನ್ನು ಒದಗಿಸುವುದು)

## ಮಹಿಳಾ ಕಾರ್ಮಿಕರಿಗೆ ಮೆಡಿಕಲ್ ಬೋನಸ್ ನೀಡುವ ಬಗ್ಗೆ

**ಶ್ರೀ ಮಾನೆ ಶ್ರೀನಿವಾಸ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೭೩೦ (೭೬೫) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಹೊರಗುತ್ತಿಗೆ ಮಹಿಳಾ ಪೌರ ಕಾರ್ಮಿಕರಿಗೆ ತಲಾ ರೂ. ೨,೫೦೦/-ರಂತೆ ಕಲಂ ೧೮ರ ಪ್ರಕಾರ ಮೆಡಿಕಲ್ ಬೋನಸ್ ಮೊತ್ತವನ್ನು ಪಾವತಿಸುವ ಯೋಜನೆ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆಯಲ್ಲಿ ಹೊರಗುತ್ತಿಗೆ ಮೇಲೆ ಕೆಲಸ ಮಾಡುತ್ತಿರುವ ಎಷ್ಟು ಹೊರಗುತ್ತಿಗೆ ಮಹಿಳಾ ಪೌರ ಕಾರ್ಮಿಕರಿಗೆ ಹೆರಿಗೆ ಸೌಲಭ್ಯಗಳ ಕಾಯ್ದೆ, ೧೯೬೧ರನ್ವಯ ಯಾವ ಯಾವ ಸಾಲಿನಲ್ಲಿ ಎಷ್ಟು ಮೆಡಿಕಲ್ ಸಂದಾಯ ಮಾಡಲಾಗಿದೆ ;

(ಇ) ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆಯಲ್ಲಿ ಹೊರಗುತ್ತಿಗೆ ಮೇಲೆ ಕೆಲಸ ಮಾಡುತ್ತಿರುವ ಎಷ್ಟು ಹೊರಗುತ್ತಿಗೆ ಮಹಿಳಾ ಪೌರ ಕಾರ್ಮಿಕರಿಗೆ ಹೆರಿಗೆ ಸೌಲಭ್ಯಗಳ ಕಾಯ್ದೆ, ೧೯೬೧ರನ್ವಯ ಸಂದಾಯವಾಗದೇ ಬಾಕಿ ಉಳಿದಿರುವುದಕ್ಕೆ ಕಾರಣಗಳೇನು ;

(ಈ) ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆಯಲ್ಲಿ ಹೊರಗುತ್ತಿಗೆಯಲ್ಲಿ ಕೆಲಸ ಮಾಡುತ್ತಿರುವ ಎಷ್ಟು ಮಹಿಳಾ ಪೌರ ಕಾರ್ಮಿಕರಿಗೆ ಹೆರಿಗೆ ಸೌಲಭ್ಯಗಳ ಕಾಯ್ದೆ, ೧೯೬೧ರನ್ವಯ ಬಾಕಿ ಉಳಿದಿರುವ ಸೌಲಭ್ಯಗಳನ್ನು ಪೂರೈಸಲಾಗುವುದು ಯಾವಾಗ ?

## ಶುದ್ಧ ಕುಡಿಯುವ ನೀರನ್ನು ಪೂರೈಸುವ ಬಗ್ಗೆ

**ಶ್ರೀ ಮಾನೆ ಶ್ರೀನಿವಾಸ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೩೧ (೭೬೬) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹಾವೇರಿ ಜಿಲ್ಲೆಯ ಹಾನಗಲ್ ನಗರದ ಸಾರ್ವಜನಿಕರಿಗೆ ಪ್ರತಿನಿತ್ಯ ಕುಡಿಯಲು ಹಾಗೂ ದಿನಬಳಕೆಗೆ ಕಲುಷಿತ ನೀರು ಸರಬರಾಜು ಆಗುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ; ಕಲುಷಿತ ನೀರು ಸರಬರಾಜು ಆಗುತ್ತಿರುವುದಕ್ಕೆ ಕಾರಣಗಳೇನು;

(ಆ) ಕಲುಷಿತ ನೀರು ಪೂರೈಕೆಯಿಂದ ಸಾರ್ವಜನಿಕರ ಆರೋಗ್ಯದ ಮೇಲೆ ಉಂಟಾಗಿರುವ ದುಷ್ಪರಿಣಾಮಗಳೇನು ; ಹೊಣೆಗಾರರು ಯಾರು ;



(ಇ) ಹಾವೇರಿ ಜಿಲ್ಲೆಯ ಹಾನಗಲ್ ನಗರದ ಜನರಿಗೆ ಶುದ್ಧ ನೀರನ್ನು ಪೂರೈಸಲು ಸರ್ಕಾರ ಕೈಗೊಳ್ಳುವ ಕ್ರಮಗಳೇನು ; ಹಾಗೂ ಇದಕ್ಕೆ ಬೇಕಾಗುವ ಕಾಲಾವಕಾಶ ಎಷ್ಟು ?

## ಸಹಕಾರಿ ಇಲಾಖೆ ಕಾರ್ಯಾಲಯಗಳ ಬಗ್ಗೆ

**ಶ್ರೀ ಸಿ.ಆರ್. ಮನೋಹರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೩೨ (೮೧೧) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಹಕಾರ ಇಲಾಖಾ ವ್ಯಾಪ್ತಿಯ ಕಾರ್ಯಾಲಯಗಳಲ್ಲಿ ಮಂಜೂರಾದ ಮತ್ತು ಖಾಲಿ ಇರುವ ವಿವಿಧ ದರ್ಜೆಯ ಹುದ್ದೆಗಳ ಸಂಖ್ಯೆ ಎಷ್ಟು ;

(ಆ) ಸದರಿ ಹುದ್ದೆಗಳನ್ನು ಭರ್ತಿ ಮಾಡಿ ಆಡಳಿತ ವ್ಯವಸ್ಥೆಯನ್ನು ಸುಗಮಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಇಲಾಖಾ ಸಿಬ್ಬಂದಿಗಳು ಅವ್ಯವಹಾರಗಳಲ್ಲಿ ತೊಡಗಿದ್ದು, ಎಷ್ಟು ಪ್ರಕರಣಗಳು ಕಳೆದ ಎರಡು ವರ್ಷಗಳಲ್ಲಿ ದಾಖಲಾಗಿವೆ ; ಅಂಥವರುಗಳ ಮೇಲೆ ಸರ್ಕಾರ ಕೈಗೊಂಡ ಕ್ರಮಗಳೇನು ?

## ಕರ್ನಾಟಕ ಸಾಬೂನು ಮಾರ್ಜಕ ನಿಗಮದಿಂದ ಉತ್ಪನ್ನಗಳ ಜಾಹಿರಾತು ನೀಡಲಾಗಿರುವ ಬಗ್ಗೆ

**ಶ್ರೀ ಸಿ.ಆರ್. ಮನೋಹರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೩೩ (೮೩೩) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ಸಾಬೂನು ಮತ್ತು ಮಾರ್ಜಕ ನಿಯಮಿತ (Mysuru sandal company) ಸಂಸ್ಥೆಯಲ್ಲಿ ೨೦೨೦-೨೧ನೇ ಸಾಲಿನಲ್ಲಿ ನಿಗಮದ ಉತ್ಪನ್ನಗಳ ಬಗ್ಗೆ ಜಾಹೀರಾತು ನೀಡಲು ಮೀಸಲಿರಿಸಿರುವ ಅನುದಾನವೆಷ್ಟು ;

(ಆ) ನಿಗಮದಿಂದ ಯಾವ ಯಾವ ರೀತಿಯಲ್ಲಿ ಜಾಹೀರಾತು ನೀಡಲಾಗುತ್ತಿದೆ ; (ವಿವರವನ್ನು ನೀಡುವುದು)

(ಇ) ಜಾಹೀರಾತಿಗಾಗಿ ಮೀಸಲಿರಿಸಿರುವ ಅನುದಾನದಲ್ಲಿ ವೆಚ್ಚ ಮಾಡಿರುವ ಅನುದಾನ ಎಷ್ಟು ; (ಮಾಹಿತಿ ನೀಡುವುದು)

(ಈ) ಯಾವ ಯಾವ ಮಾಧ್ಯಮದ (ಉದಾ: ಪತ್ರಿಕೆ, ಹೋರ್ಡಿಂಗ್, ರೇಡಿಯೋ) ಮೂಲಕ ಜಾಹೀರಾತು ನೀಡಲಾಗುತ್ತದೆ ? (ವಿವರವನ್ನು ನೀಡುವುದು)

## ತೋಟಗಾರಿಕಾ ಇಲಾಖೆಯಲ್ಲಿರುವ ಮಂಡಳಿಗಳ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೭೩೪ (೭೭೭) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ತೋಟಗಾರಿಕೆ ಇಲಾಖೆಯಲ್ಲಿ ಎಷ್ಟು ತೋಟಗಾರಿಕಾ ಬೆಳೆಗಳಿಗೆ ಮಂಡಳಿಗಳನ್ನು ರಚಿಸಲಾಗಿದೆ ಅವು ಯಾವುವು ;

(ಆ) ಈ ತೋಟಗಾರಿಕಾ ಬೆಳೆಗಳಿಗೆ ರಚಿಸಲಾದ ಮಂಡಳಿಗಳಿಗೆ ಸರ್ಕಾರದಿಂದ ಕಳೆದ ಎರಡು ವರ್ಷಗಳಲ್ಲಿ ನೀಡಿದ ಅನುದಾನವೆಷ್ಟು ; (ಮಂಡಳಿವಾರು ವಿವರ ನೀಡುವುದು)

(ಇ) ಮಾವು ಮತ್ತು ಹಲಸಿನ ಕೃಷಿಕರಿಗೆ ಯಾವ ಯಾವ ಸೌಲಭ್ಯಗಳನ್ನು ನೀಡಲಾಗುತ್ತದೆ ?



## ವಾಸಯೋಗ್ಯ ಪ್ರಮಾಣ ಪತ್ರ (OC) ಅವ್ಯವಹಾರ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೭೩೫ (೭೭೬) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ನಗರಗಳಲ್ಲಿ ಬಹುಮಹಡಿ ಕಟ್ಟಡಗಳಿಗೆ ವಾಸಯೋಗ್ಯ ಪ್ರಮಾಣ ಪತ್ರ (OC) ನೀಡಲು ಇರುವ ನಿಯಮಗಳೇನು ;

(ಆ) ಬಹುಮಹಡಿ ವಸತಿ ಸಂಕೀರ್ಣಗಳಿಗೆ ಅಗ್ನಿ ಶಾಮಕ ಇಲಾಖೆಯಿಂದ ನಿರಾಪೇಕ್ಷಣಾ ಪತ್ರ ಪಡೆದ ಬಳಿಕ ಮಾತ್ರವೇ ವಾಸಯೋಗ್ಯ ಪ್ರಮಾಣ ಪತ್ರ (OC) ನೀಡಲಾಗುವುದೆ ;

(ಇ) ರಾಜ್ಯದ ಹಲವಾರು ಬಹುಮಹಡಿ ಕಟ್ಟಡಗಳು ಅಕ್ರಮ ಅವ್ಯವಹಾರ, ಭ್ರಷ್ಟಾಚಾರ ಎಸಗುವ ಮೂಲಕ ವಾಸಯೋಗ್ಯ ಪ್ರಮಾಣ ಪತ್ರ (OC) ಪಡೆದುಕೊಂಡಿದ್ದು, ಈ ರೀತಿಯ ಅಕ್ರಮ ವಾಸಯೋಗ್ಯ ಪ್ರಮಾಣ ಪತ್ರ (OC) ದಿಂದಾಗಿ ಆದ ಅವಘಡಗಳಿಂದ ಪ್ರಾಣ ಹಾನಿಯಾದಲ್ಲಿ ಯಾರನ್ನು ಹೊಣೆಗಾರರನ್ನಾಗಿ ಮಾಡಲಾಗುತ್ತದೆ ; ಈ ಕುರಿತು ಸರ್ಕಾರದ ನಿಲುವೇನು ?

## ಕಬ್ಬನ್ ಪಾರ್ಕ್ ಮತ್ತು ಲಾಲ್‌ಬಾಗ್‌ಗಳಲ್ಲಿ ವಾಹನ ಸಂಚಾರದ ಬಗ್ಗೆ

**ಶ್ರೀ ಎನ್.ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೭೩೬ (೭೭೮) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಬ್ಬನ್ ಪಾರ್ಕ್ ಮತ್ತು ಲಾಲ್‌ಬಾಗ್ ಉದ್ಯಾನಗಳಲ್ಲಿ ವಾಹನ ಸಂಚಾರ ಮತ್ತು ನಿಲುಗಡೆ ಸೌಲಭ್ಯವನ್ನು ನೀಡಿರುವುದರಿಂದ ಅಲ್ಲಿರುವ ಪ್ರಾಣಿ ಮತ್ತು ಪಕ್ಷಿಗಳಿಗೆ ತೊಂದರೆಯುಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ವಾಹನ ನಿಲುಗಡೆ ಸೌಲಭ್ಯವನ್ನು ರದ್ದುಗೊಳಸುವ ಬಗ್ಗೆ ಸರ್ಕಾರದ ನಿಲುವೇನು ;

(ಆ) ಕಬ್ಬನ್ ಪಾರ್ಕ್ ಮತ್ತು ಲಾಲ್‌ಬಾಗ್‌ಗಳಲ್ಲಿ ಅನಧಿಕೃತವಾಗಿ ವಾಣಿಜ್ಯ ಉದ್ದೇಶಗಳಿಗಾಗಿ ಕಟ್ಟಡ ನಿರ್ಮಾಣ ಮಾಡಿದ್ದು ಅವುಗಳನ್ನು ತೆರವುಗೊಳಿಸುವ ಕುರಿತು ಸರ್ಕಾರದ ನಿಲುವೇನು ;

(ಇ) ಕಬ್ಬನ್ ಪಾರ್ಕ್ ಮತ್ತು ಲಾಲ್‌ಬಾಗ್‌ಗಳು ಬೆಂಗಳೂರು ನಗರಕ್ಕೆ ಆಮ್ಲಜನಕ ನೀಡುವ ಮುಖ್ಯ ಭಾಗವಾಗಿದ್ದು ಈ ಪ್ರದೇಶಗಳಲ್ಲಿ ವಾಹನ ಸಂಚಾರ ಮತ್ತು ವಾಣಿಜ್ಯ ವ್ಯವಹಾರಗಳನ್ನು ರದ್ದು ಮಾಡುವ ಬಗ್ಗೆ ಸರ್ಕಾರ ಕ್ರಮ ಕೈಗೊಳ್ಳುವುದೇ ; ಈ ಕುರಿತು ಸರ್ಕಾರದ ನಿಲುವೇನು ?

## ಅಕ್ರಮ ಕಟ್ಟಡಗಳ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೩೭ (೭೭೫) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ನಗರಗಳಲ್ಲಿರುವ ಅಕ್ರಮ ಕಟ್ಟಡಗಳ ಸಂಖ್ಯೆ ಎಷ್ಟು ; ಈ ಅಕ್ರಮ ಕಟ್ಟಡಗಳನ್ನು ತೆರವುಗೊಳಿಸಲು ಕಳೆದ ೩ ವರ್ಷಗಳಲ್ಲಿ ಸರ್ಕಾರ ಯಾವ ಕ್ರಮ ಕೈಗೊಂಡಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)



(ಆ) ಅಕ್ರಮ ಕಟ್ಟಡಗಳಿಗೆ ಯಾವ ಯಾವ ಸೌಲಭ್ಯಗಳನ್ನು ನೀಡಲಾಗಿದೆ ; ಅಕ್ರಮ ಕಟ್ಟಡಗಳನ್ನು ಯಾವಾಗ ನೆಲಸಮಗೊಳಿಸಲಾಗುವುದು ;

(ಇ) ಕಳೆದ ಎರಡು ವರ್ಷದಲ್ಲಿ ಅಕ್ರಮವಾಗಿ ನಿರ್ಮಿಸಲಾದ ಕಟ್ಟಡಗಳು ಕುಸಿದು ಪ್ರಾಣ ಹಾನಿಯಾಗಿರುವ ಕುರಿತು ವರದಿಯಾಗಿರುವ ಪ್ರಕರಣಗಳು ಎಷ್ಟು ; ಈ ಕುರಿತು ಸರ್ಕಾರ ಕೈಗೊಂಡಿರುವ ಕ್ರಮ ಏನು ?

## ಕೃಷಿ ಮಾರುಕಟ್ಟೆಯಲ್ಲಿ ಮಧ್ಯವರ್ತಿಗಳ ಹಾವಳಿ ತಪ್ಪಿಸುವ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೩೮ (೭೭೯) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಕೃಷಿ ಉತ್ಪನ್ನ ಮಾರುಕಟ್ಟೆಗಳಲ್ಲಿ ಮಧ್ಯವರ್ತಿಗಳ ಹಾವಳಿಯನ್ನು ತಪ್ಪಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ಕೃಷಿ ಉತ್ಪನ್ನ ಮಾರುಕಟ್ಟೆಗಳಲ್ಲಿ ಬೆಂಬಲ ಬೆಲೆಗಿಂತ ಕಡಿಮೆ ಬೆಲೆಗೆ ವರ್ತಕರು ರೈತರಿಂದ ಕೃಷಿ ಉತ್ಪನ್ನಗಳನ್ನು ಖರೀದಿಸುವ ಮೂಲಕ ರೈತರಿಗೆ ವಂಚಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ರೀತಿಯ ವಂಚಕ ವರ್ತಕರ ಮೇಲೆ ಯಾವ ರೀತಿಯ ಕ್ರಮ ಕೈಗೊಳ್ಳಲಾಗಿದೆ ;

(ಇ) ೨೦೨೦–೨೧ನೇ ಸಾಲಿನಲ್ಲಿ ಯಾವ ಯಾವ ಕೃಷಿ ಬೆಳೆಗಳಿಗೆ ಎಷ್ಟು ಬೆಂಬಲ ಬೆಲೆ ನಿಗಧಿ ಪಡಿಸಲಾಗಿದೆ ? (ಬೆಳೆವಾರು ವಿವರ ನೀಡುವುದು)

## ಬೃಹತ್ ಮೈಸೂರು ಮಹಾನಗರ ಪಾಲಿಕೆ ರಚನೆ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜು)(ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೭೩೯ (೮೦೩) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೃಹತ್ ಮೈಸೂರು ಮಹಾನಗರ ಪಾಲಿಕೆ ರಚನೆಯ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ರಿಂಗ್ ರಸ್ತೆಯ ಒಳಗಿನ ಎಲ್ಲಾ ಪ್ರದೇಶಗಳು ಹಾಗೂ ಗ್ರಾಮ ಪಂಚಾಯಿತಿಗಳು, ಗ್ರಾಮ ಪಂಚಾಯಿತಿಗೆ ಸೇರಿದ ಪ್ರದೇಶಗಳನ್ನು ಸೇರಿಸಿ, ಬೃಹತ್ ಮೈಸೂರು ಮಹಾನಗರ ಪಾಲಿಕೆ ರಚನೆಗೆ ಕ್ರಮ ತೆಗೆದುಕೊಳ್ಳಲಾಗುವುದೇ ; (ವಿವರಗಳನ್ನು ಒದಗಿಸುವುದು)

(ಆ) ಆದಷ್ಟು ಬೇಗ ಬೃಹತ್ ಮೈಸೂರು ಮಹಾನಗರ ಪಾಲಿಕೆಯನ್ನು ರಚನೆ ಮಾಡುವ ಮೂಲಕ ಮೈಸೂರು ನಗರದ ಸುವ್ಯವಸ್ಥಿತ ಬೆಳವಣಿಗೆ ಕ್ರಮ ತೆಗೆದುಕೊಳ್ಳಲಾಗುವುದೇ ;

(ಇ) ಮೈಸೂರು ನಗರಕ್ಕೆ ಪ್ರತ್ಯೇಕವಾದ ವಾಣಿ ವಿಲಾಸ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯನ್ನು ರಚಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

## ಶ್ರೀರಾಮಪುರ–ಮೈಸೂರು ಬ್ಯಾಂಕ್ ಕಾಲೋನಿಯ ರಸ್ತೆಗಳಲ್ಲಿ ಮಳೆ ನೀರು ನುಗ್ಗಿ ತೊಂದರೆಯಾಗಿರುವ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜು)(ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೭೪೦ (೮೦೪) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–



(ಅ) ಮೈಸೂರು ನಗರದ ಶ್ರೀರಾಮಪುರದ ಎರಡನೇ ಹಂತದ ಮೈಸೂರು ಬ್ಯಾಂಕ್ ಕಾಲೋನಿ ೨೮,೨೯,೩೦ ಮತ್ತು ೩೧ನೇ ಬ್ಲಾಕ್‌ಗಳು ಕೆಳಹಂತದಲ್ಲಿದ್ದು, ಪ್ರತಿವರ್ಷ ಮಳೆಗಾಲದಲ್ಲಿ ಮಳೆ ನೀರು ಮನೆಗಳಿಗೆ ನುಗ್ಗಿ ನಿವಾಸಿಗಳಿಗೆ ತೊಂದರೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಪ್ರದೇಶದಲ್ಲಿ ಮಳೆ ನೀರು ಸುಲಲಿತವಾಗಿ ಹರಿದು ಹೋಗಲು ದೊಡ್ಡ ಕಾಲುವೆಯನ್ನು ನಿರ್ಮಿಸುವ ಯೋಜನೆ ರೂಪಿಸಲಾಗಿದೆಯೇ ; ಯಾವ ಅನುದಾನದ ಅಡಿಯಲ್ಲಿ ಈ ಯೋಜನೆಯನ್ನು ರೂಪಿಸಲಾಗಿದೆ ; ಯೋಜನೆಯನ್ನು ರೂಪಿಸದಿದ್ದಲ್ಲಿ, ಈ ಬಗ್ಗೆ ಶೀಘ್ರ ಕ್ರಮ ತೆಗೆದುಕೊಂಡು ಮಳೆ ನೀರು ಸರಾಗವಾಗಿ ಹರಿದು ಹೋಗುವಂತೆ ಮಾಡುವ ಮೂಲಕ ನಿವಾಸಿಗಳಿಗೆ ಅನುಕೂಲವಾಗುವಂತೆ ಸರ್ಕಾರ ಕ್ರಮವಹಿಸುವುದೇ ?

## ವಿಜಯಪುರದಲ್ಲಿ ನಿರ್ಮಾಣವಾಗುತ್ತಿರುವ ವಿಮಾನ ನಿಲ್ದಾಣ ಕಾಮಗಾರಿಯ ಪ್ರಗತಿಯ ಬಗ್ಗೆ

**ಶ್ರೀ ಸುನೀಲ್ ಗೌಡ ಬಸನಗೌಡ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೪೧ (೭೭೦) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಜಯಪುರ ನಗರದಲ್ಲಿ ನಿರ್ಮಾಣ ಮಾಡುತ್ತಿರುವ ವಿಮಾನ ನಿಲ್ದಾಣ ಕಾಮಗಾರಿಯು ವಿಳಂಬವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಕಾಮಗಾರಿಯನ್ನು ಶೀಘ್ರಗೊಳಿಸಲು ಕೈಗೊಂಡ ಕ್ರಮಗಳೇನು ;

(ಆ) ಸದರಿ ಕಾಮಗಾರಿಯ ಅಂದಾಜು ಪಟ್ಟಿಯನ್ನು ಅಂತಿಮಗೊಳಿಸಲಾಗಿದೆಯೇ ; ಅಂತಿಮಗೊಳಿಸದಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಅಂತಿಮಗೊಳಿಸಲಾಗುವುದು ; (ವಿವರ ನೀಡುವುದು)

(ಇ) ಈ ಕಾಮಗಾರಿಗೆ ಸಂಬಂಧಪಟ್ಟಂತೆ ಟೆಂಡರ್ ಪ್ರಕ್ರಿಯೆಯನ್ನು ಪ್ರಾರಂಭಿಸಲಾಗಿದೆಯೇ ; ಇಲ್ಲದಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಪ್ರಾರಂಭಿಸಲಾಗುವುದು ? (ವಿವರ ನೀಡುವುದು)

**ಕೆ. ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. 0 97/400 ಪ್ರತಿಗಳು/10–12–2020